ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 159 RNI Number : KNKAN/25/A2770 17-06-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :159 ರಾಯಚೂರು 17-06-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563

ಮೇಲ್ಮನೆ ಚುನಾವಣೆ ಮಧ್ಯೆ ಕಾಂಗ್ರೆಸ್, ಜೆಡಿಎಸ್ ಶಾಸಕರ ರೆಸಾರ್ಟ್ ಪಾಲಿಟಿಕ್ಸ್

ಬೆಂಗಳೂರು,ಜೂ.16-

ವಿಧಾನಪರಿಷತ್ ಚುನಾವಣೆ ಗುರುವಾರ ನಡೆಯಲಿದ್ದು, ಇತ್ತ ಆಡಳಿತಾರೂಢ ಕಾಂಗ್ರೆಸ್ ಪಕ್ಷ ಹಾಗೂ ಜೆಡಿಎಸ್ ಶಾಸಕರು ರೆಸಾರ್ಟ್ ಸೇರಿಕೊಂಡಿದ್ದಾರೆ. ಪರಿಷತ್ ಕಣದಲ್ಲಿ ಏಳನೇ ಅಭ್ಯರ್ಥಿ ಅಖಾಡಕ್ಕಿಳಿಸಿರುವುದು ಮೇಲ್ಮನೆ ಚುನಾವಣೆಯನ್ನು ರಂಗೇರಿಸಿದೆ.

ಜೂನ್ 18ರಂದು 7 ಸ್ಥಾನಗಳಿಗೆ ನಡೆಯಲಿರುವ ಚುನಾವಣೆಯಲ್ಲಿ ಕಾಂಗ್ರೆಸ್ 5 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರೆ, ಬಿಜೆಪಿ 2 ಹಾಗೂ ಜೆಡಿಎಸ್ ಓರ್ವ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ. ಕಾಂಗ್ರೆಸ್‌ನ 4 ಹಾಗೂ ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಸರಾಗವಾಗಿ ಗೆಲುವು ಸಾಧಿಸಲಿದ್ದಾರೆ. ಏಳನೇ ಸ್ಥಾನಕ್ಕೆ ಜಟಾಪಟಿ ಜೋರಾಗಿದೆ. ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕಾರ್ತಿಕ್ ಹಾಗೂ ಜೆಡಿಎಸ್ ಅಭ್ಯರ್ಥಿ ಗೋವಿಂದ ರಾಜು ನಡುವೆ ಸ್ಪರ್ಧೆ ಏರ್ಪಟ್ಟಿದೆ.

ಕಾಂಗ್ರೆಸ್ ಹಾಗೂ ಜೆಡಿಎಸ್‌ನಿಂದ ರೆಸಾರ್ಟ್ ಪಾಲಿಟಿಕ್ಸ್: ಮೇಲ್ಮನೆ ಚುನಾವಣೆ ಹಿನ್ನೆಲೆ ಇತ್ತ ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷ ಜೆಡಿಎಸ್ ಪಕ್ಷ ರೆಸಾರ್ಟ್ ಪಾಲಿಟಿಕ್ಸ್ ಮೊರೆ ಹೋಗಿವೆ. ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಯನ್ನು ಬಿಡದಿಯ ವಂಡರ್ ಲಾ ರೆಸಾರ್ಟ್‌ನಲ್ಲಿ ಕರೆದಿದೆ. ಸಿಎಂ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಶಾಸಕಾಂಗ ಸಭೆ ಇಂದು (ಮಂಗಳವಾರ) ರಾತ್ರಿ ನಡೆಯಲಿದೆ. ಸಭೆಯಲ್ಲಿ ಕಾಂಗ್ರೆಸ್ ಯಾವ ಅಭ್ಯರ್ಥಿಗೆ ಎಷ್ಟು ಮೊದಲ ಪ್ರಾಶಸ್ತ್ಯದ ಮತ ಹಾಕಬೇಕು, ಎರಡನೇ ಪ್ರಾಶಸ್ತ್ಯದ ಮತ ಹಾಕಬೇಕು ಎಂಬ ಬಗ್ಗೆ ಶಾಸಕರಿಗೆ ಮಾಹಿತಿ ನೀಡಲಾಗುವುದು.

ಇದರ ಜೊತೆಗೆ ಕಾಂಗ್ರೆಸ್ ಐದನೇ ಅಭ್ಯರ್ಥಿ ವಿನಯ್ ಕಾರ್ತಿಕ್‌ಗೆ ಎಷ್ಟು ಮತ ಹಾಕಬೇಕು. ಯಾವುದೇ ದೋಷವಿಲ್ಲದೆ, ಅಸಿಂಧುವಾಗದಂತೆ ಹೇಗೆ ಮತ ಹಾಕಬೇಕು ಎಂಬುದನ್ನು ಸಭೆಯಲ್ಲಿ ಶಾಸಕರಿಗೆ ಮನವರಿಕೆ ಮಾಡಿಕೊಡಲಾಗುವುದು. ಕಾಂಗ್ರೆಸ್ ಶಾಸಕಾಂಗ ಸಭೆ ಬಳಿಕವೂ ಕೈ ಶಾಸಕರು ರೆಸಾರ್ಟ್‌ನಲ್ಲೇ ತಂಗಲಿದ್ದಾರೆ. ಜೂನ್ 18ಕ್ಕೆ ಶಾಸಕರು ರೆಸಾರ್ಟ್‌ನಿಂದ ನೇರವಾಗಿ ಬಸ್ ಮೂಲಕ ವಿಧಾನಸೌಧಕ್ಕೆ ಆಗಮಿಸಿ ಮತ ಚಲಾವಣೆ ಮಾಡಲಿದ್ದಾರೆ.

ಜೆಡಿಎಸ್ ಶಾಸಕರಿಂದಲೂ ರೆಸಾರ್ಟ್ ವಾಸ್ತವ್ಯ: ಇತ್ತ ಜೆಡಿಎಸ್ ಶಾಸಕರೂ ರೆಸಾರ್ಟ್ ವಾಸ್ತವ್ಯ ಮಾಡಲಿದ್ದಾರೆ. ಜೆಡಿಎಸ್ ಗೋವಿಂದ ರಾಜ್ ಅವರನ್ನು ಕಣಕ್ಕಿಳಿಸಿದೆ. ಗೋವಿಂದ ರಾಜ್ ಎನ್‌ಡಿಎ ಅಭ್ಯರ್ಥಿಯಾಗಿದ್ದಾರೆ. ಜೆಡಿಎಸ್ ಬಳಿ ಸಂಖ್ಯಾಬಲ ಇಲ್ಲ. ಆದರೆ, ಬಿಜೆಪಿಯ ಉಳಿಕೆ ಮತ ಹಾಗೂ ಬಿಜೆಪಿ ಉಚ್ಚಾಟಿತ ಶಾಸಕರ ಮತಗಳ ಮೇಲೆ ಕಣ್ಣಿಟ್ಟಿದೆ. ಇದರ ಜೊತೆಗೆ ತನ್ನ 18 ಶಾಸಕರನ್ನೂ ಒಟ್ಟಾಗಿ ಹಿಡಿದಿಟ್ಟುಕೊಂಡು ತನ್ನ ಅಭ್ಯರ್ಥಿಗೇ ಮತ ಹಾಕಿಸುವ ಸವಾಲು ಜೆಡಿಎಸ್ ಮೇಲಿದೆ.

ಅಡ್ಡ ಮತದಾನದ ಭೀತಿ: ಏಳನೇ ಅಭ್ಯರ್ಥಿಗಳ ಹಣಾಹಣಿಯಲ್ಲಿ ಅಡ್ಡ ಮತದಾನ ಆಗುವ ಬಗ್ಗೆ ಸಾಕಷ್ಟು ಚರ್ಚೆ ನಡೆಯುತ್ತಿದೆ. ಇತ್ತ ಕೆಲ ಜೆಡಿಎಸ್ ಶಾಸಕರಿಂದ ಕಾಂಗ್ರೆಸ್ ಅಭ್ಯರ್ಥಿ ಪರ ಅಡ್ಡ ಮತದಾನ ನಡೆಯಲಿದೆಯಾ ಎಂಬ ಆತಂಕ ಜೆಡಿಎಸ್ ಪಕ್ಷದಲ್ಲಿ ಎದ್ದು ಕಾಣುತ್ತಿದೆ. ಹೀಗಾಗಿ ಜೆಡಿಎಸ್‌ಗೆ ತನ್ನ 18 ಶಾಸಕರನ್ನೂ ಹಿಡಿದಿಟ್ಟುಕೊಳ್ಳುವ ಸವಾಲು ಹೊಂದಿದೆ. 18 ಶಾಸಕರೂ ತಮ್ಮ ಅಭ್ಯರ್ಥಿಗೇ ಮತ ಹಾಕುವುದನ್ನು ಖಚಿತ ಪಡಿಸುವ ಅಗ್ನಿಪರೀಕ್ಷೆ ಜೆಡಿಎಸ್ ನದ್ದಾಗಿದೆ.

ಒಂದು ವೇಳೆ ಅಡ್ಡ ಮತದಾನ ಅಥವಾ ಮತದಾನದ ವೇಳೆ ಗೈರಾದರೆ ಜೆಡಿಎಸ್‌ಗೆ ಅದು ರಾಜಕೀಯವಾಗಿ ಹಿನ್ನಡೆಯಾಗಲಿದೆ. ತಮ್ಮ ಶಾಸಕರನ್ನು ಹಿಡಿದಿಟ್ಟುಕೊಳ್ಳಲು ಜೆಡಿಎಸ್ ವಿಫಲವಾಗಿದೆ ಎಂಬ ನಾನಾ ವ್ಯಾಖ್ಯಾನಗಳು ಹುಟ್ಟಿಕೊಳ್ಳಲಿವೆ. ಹೀಗಾಗಿ ಹೆಚ್.ಡಿ.ಕುಮಾರಸ್ವಾಮಿಗೆ ಮೇಲ್ಮನೆ ಚುನಾವಣೆ ಪ್ರತಿಷ್ಠೆಯ ಪ್ರಶ್ನೆಯಾಗಿದೆ. ಅದಕ್ಕಾಗಿ ತಮ್ಮ ಶಾಸಕರನ್ನು ರೆಸಾರ್ಟ್‌ನಲ್ಲಿ ಇರಿಸಲು ಮುಂದಾಗಿದ್ದಾರೆ.

ಪಕ್ಷಗಳ ಸಂಖ್ಯಾ ಬಲ, ಗೆಲುವಿನ ಲೆಕ್ಕಾಚಾರ ಹೇಗಿದೆ? ಕೊನೆ ಕ್ಷಣದ ಬೆಳವಣಿಗೆ ಎಂಬಂತೆ ಜೆಡಿಎಸ್ ಗೊಂವಿಂದ ರಾಜ್ ಅವರನ್ನು ಪರಿಷತ್‌ನ 7ನೇ ಸ್ಥಾನಕ್ಕೆ ಅಭ್ಯರ್ಥಿಯಾಗಿ ಕಣಕ್ಕಿಳಿಸಿದೆ. ಕಾಂಗ್ರೆಸ್ ವಿನಯ್ ಕಾರ್ತಿಕ್ ಅವರನ್ನು 7ನೇ ಸ್ಥಾನಕ್ಕೆ ಕಣಕ್ಕಿಳಿಸಿದೆ. ಹೀಗಾಗಿ 7ನೇ ಸ್ಥಾನಕ್ಕೆ ಜಿದ್ದಾಜಿದ್ದಿ ಏರ್ಪಟ್ಟಿದೆ. ಕಾಂಗ್ರೆಸ್ ಸಂಖ್ಯಾಬಲದ ಆಧಾರದಲ್ಲಿ 4 ಸ್ಥಾನಗಳನ್ನು ನಿರಾಯಾಸವಾಗಿ ಗೆಲ್ಲಲಿದೆ. ಇತ್ತ ಬಿಜೆಪಿ 2 ಸ್ಥಾನಗಳನ್ನು ನಿರಾಯಾಸವಾಗಿ ಗೆಲ್ಲಲಿದೆ. 7ನೇ ಸ್ಥಾನಕ್ಕೆ ಕಾಂಗ್ರೆಸ್ ಅಭ್ಯರ್ಥಿಗೆ ಮೂವರು ಪಕ್ಷೇತರರು ಹಾಗೂ ಇಬ್ಬರು ಉಚ್ಚಾಟಿತ ಬಿಜೆಪಿ ಶಾಸಕರ ಬೆಂಬಲ ಬೇಕಿದೆ. ಒಂದು ವೇಳೆ ಕಾಂಗ್ರೆಸ್ ತನ್ನ ಮೊದಲ ನಾಲ್ವರು ಅಭ್ಯರ್ಥಿಗಳಿಗೆ 29 ಮೊದಲ ಪ್ರಾಶಸ್ತ್ಯದ ಮತಗಳನ್ನು ಹಾಕಿಸಿದರೆ, ಕಾಂಗ್ರೆಸ್ 5ನೇ ಅಭ್ಯರ್ಥಿಗೆ ಮೂವರು ಪಕ್ಷೇತರ ಹಾಗೂ ಇಬ್ಬರು ಉಚ್ಚಾಟಿತ ಬಿಜೆಪಿ ಶಾಸಕರ ಬೆಂಬಲದ ಮತ ಬಿದ್ದರೂ ಕೊರತೆ ಬೀಳಲಿದೆ. ಆ ವೇಳೆ ಅಡ್ಡ ಮತದಾನ ಆಗುವ ಸಾಧ್ಯತೆ ಇದೆ.

ಇತ್ತ ಜೆಡಿಎಸ್ ಅಭ್ಯರ್ಥಿಗೆ ಮೂರರಿಂದ ಆರೇಳು ಸ್ಥಾನಗಳ ಕೊರತೆ ಬರಲಿದೆ. ಬಿಜೆಪಿ ತನ್ನ ಇಬ್ಬರು ಅಭ್ಯರ್ಥಿಗಳಿಗೆ ತಲಾ 29 ಪ್ರಥಮ ಪ್ರಾಶಸ್ತ್ಯದ ಮತ ಹಾಕಲಿದೆ. ಬಳಿಕ ಬಿಜೆಪಿ ಬಳಿ 4 ಮತಗಳು ಉಳಿಯಲಿವೆ. ಇತ್ತ 18 ಜೆಡಿಎಸ್ ಮತಗಳನ್ನು ಹೊಂದಿದ್ದು, ಜೆಡಿಎಸ್ ಅಭ್ಯರ್ಥಿಗೆ ಮೈತ್ರಿಯ ಸುಮಾರು 22 ಮತಗಳು ಬೀಳಲಿದ್ದು, ಆರು ಮತಗಳು ಕೊರತೆಯಾಗಲಿದೆ. ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮತ ಬಿದ್ದರೆ 23 ಮತಗಳು ಆಗಲಿವೆ. ಉಳಿದ ಮತಗಳಿಗೆ ಜೆಡಿಎಸ್ ಲೆಕ್ಕಾಚಾರ ಏನು

3ನೇ ಪುಟ.....

ಕೆಪಿಆರ್‌ಎಸ್‌ನಿಂದ ವಿವಿಧ ಬೇಡಿಕೆಗೆ ಆಗ್ರಹಿಸಿ ಪ್ರತಿಭಟನೆ



ರಾಯಚೂರು,ಜೂ.16-

ರೈತರಿಗೆ ಸಮರ್ಪಕ ಬೀಜ-ರಸಗೊಬ್ಬರ ಪೂರೈಕೆ, ಬಡ ಕುಟುಂಬಗಳಿಗೆ ಮನೆ ನಿವೇಶನ ಹಾಗೂ ಹಕ್ಕುಪತ್ರ ವಿತರಣೆ ಸೇರಿದಂತೆ ವಿವಿಧ ಜನಪರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ದಿನಾಂಕ 16-06-2026 ರಂದು ಜಿಲ್ಲಾ ಆಡಳಿತ ಭವನದ ಮುಂಭಾಗದಲ್ಲಿ ಬೃಹತ್ ಧರಣಿ ಸತ್ಯಾಗ್ರಹ ನಡೆಸುವ ಕುರಿತು.

ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್‌ಎಸ್) ಜಿಲ್ಲಾ ಸಮಿತಿ, ರಾಯಚೂರು ವತಿಯಿಂದ ಈ ಮನವಿಯನ್ನು ಸಲ್ಲಿಸುತ್ತಿದ್ದೇವೆ.

ಪ್ರಸಕ್ತ ವರ್ಷ ಮುಂಗಾರು ಆರಂಭವಾಗಿದ್ದು, ಜಿಲ್ಲೆಯ ರೈತರು ಬಿತ್ತನೆ ಕಾರ್ಯಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ. ಆದರೆ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರಗಳು ಲಭ್ಯವಾಗುತ್ತಿಲ್ಲ. ಕೆಲವು ಮಾರಾಟಗಾರರು ಲಭ್ಯವಿರುವ ಬೀಜ ಮತ್ತು ಗೊಬ್ಬರವನ್ನು ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿಸಿ, ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಆದ್ದರಿಂದ ಜಿಲ್ಲಾಡಳಿತ ಕೂಡಲೇ ಮಧ್ಯಪ್ರವೇಶಿಸಿ ರೈತರಿಗೆ ಅಗತ್ಯಕ್ಕೆ ಅನುಗುಣವಾಗಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳನ್ನು ಎಂ.ಆರ್.ಪಿ. ದರದಲ್ಲಿ ಸಮರ್ಪಕವಾಗಿ ಪೂರೈಸಲು ಕ್ರಮ

3ನೇ ಪುಟ.....

ಎಸ್‌ಐಆರ್ ವಿರೋಧಿ ಜನಜಾಗೃತಿ ಜಾಥಾ, ಬೈಕ್ ರ‍್ಯಾಲಿ



ರಾಯಚೂರು,ಜೂ.16-

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆ)ರ್ ಪ್ರಕ್ರಿಯೆಯನ್ನು ವಿರೋಧಿಸಿ ಎದ್ದೇಳು ಕರ್ನಾಟಕ, ಎಸ್‌ಐಆರ್ ವಿರೋಧಿ ಸಂಘಟನೆ, ದಲಿತಪರ ಹಾಗೂ ಕಾಂಗ್ರೆಸ್ ಪಕ್ಷದಿಂದ ನಗರದಲ್ಲಿ ಬೈಕ್ ರ‍್ಯಾಲಿ ನಡೆಯಿತು.

ಜೂ.20ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ನಡೆಯಲಿರುವ ಬೃಹತ್ ಸಮಾವೇಶದ ಅಂಗವಾಗಿ, ಕಲ್ಯಾಣ ಕರ್ನಾಟಕ ಭಾಗದಿಂದ ಹೊರಡಲಿರುವ ಎಸ್‌ಐರ್ಆ ವಿರೋಧಿ ಜನಜಾಗೃತಿ ಜಾಥಾಕ್ಕೆ ಮಂಗಳವಾರ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಚಾಲನೆ ನೀಡಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಿಲ್ಲಾ ಕ್ರೀಡಾಂಗಣ ಬಳಿಯ ಗಾಂಧಿ ಪುತ್ಥಳಿಯಿಂದ ಆರಂಭವಾದ ಜನಜಾಗೃತಿ ಜಾಥಾ ಹಾಗೂ ಬೈಕ್ ರ‍್ಯಾಲಿ ಕೇಂದ್ರ ಬಸ್ ನಿಲ್ದಾಣದ ಮಾರ್ಗವಾಗಿ ತೀನ್ ಖಂದಿಲ್ ನಲ್ಲಿ ಸಂಚರಿಸಿ ಮುಕ್ತಾಯಗೊಂಡಿತು.

ದಲಿತಪರ ಹೋರಾಟಗಾರ ಎಂ.ಆರ್.ಭೇರಿ, ಅಂಬಣ್ಣ ಅರೋಲಿ ಮಾತನಾಡಿ, ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಹೆಸರಿನಲ್ಲಿ ದೇಶಾದ್ಯಂತ ಲಕ್ಷಾಂತರ ಅರ್ಹ ಮತದಾರರ ಸಾಂವಿಧಾನಿಕ ಮತದಾನದ ಹಕ್ಕನ್ನು ಕಸಿದುಕೊಳ್ಳುವ ಪ್ರಯತ್ನ ನಡೆಯುತ್ತಿದೆ. ಪಶ್ಚಿಮ ಬಂಗಾಳದಲ್ಲಿ ಎಸ್‌ಐಆರ್ ಮೂಲಕ ಮುಸ್ಲಿಮರ, ದಲಿತ, ಆದಿವಾಸಿಗಳ ಮತದಾನದ ಹಕ್ಕು ಕಸಿದುಕೊಂಡಿದ್ದಾರೆ. ಆ ಮೂಲಕ ಬಿಜೆಪಿ ಗೆಲ್ಲಲು ಕುತಂತ್ರ ಮಾಡಲಾಗಿದೆ. ಕರ್ನಾಟಕ ರಾಜ್ಯದಲ್ಲಿಯೂ ಬಿಜೆಪಿ ಗೆಲ್ಲಲು

3ನೇ ಪುಟ.....

ಬ್ಯಾಂಕ್ ಆಫ್ ಬರೋಡ ರಸ್ತೆಯ ಮಧ್ಯೆ ಜಾಲಿಗಿಡದ ಹಾವಳಿ - ತೆರವಿಗೆ ಹನುಮಂತ ನಾಯಕ ಆಗ್ರಹ



ಲಿಂಗಸಗೂರು:- ಜೂ. 16 ಪಟ್ಟಣದ ಕೆ.ಇ.ಬಿ. ಕಚೇರಿ ಪಕ್ಕದ ಬ್ಯಾಂಕ್ ಆಫ್ ಬರೋಡ ಮತ್ತು ರಕ್ತ ಭಂಡಾರ ಕೇಂದ್ರದ ಮುಂಭಾಗದ ಪ್ರಮುಖ ರಸ್ತೆಯ ಮಧ್ಯಭಾಗದಲ್ಲಿ ಜಾಲಿಗಿಡ, ಕಾಡು ಗಿಡಗಳು ಅತಿಯಾಗಿ ಬೆಳೆದು ನಿಂತಿವೆ. ಇದರಿಂದ ವಾಹನ ಸವಾರರು ಹಾಗೂ ಪಾದಚಾರಿಗಳು ಪರದಾಡುವಂತಾಗಿದೆ.

ರಸ್ತೆಯ ನಡುವೆಯೇ ಗಿಡಗಳು ಹರಡಿಕೊಂಡಿರುವುದರಿಂದ ವಾಹನಗಳ ಸಂಚಾರಕ್ಕೆ ತೀವ್ರ

3ನೇ ಪುಟ.....

ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ

ಜೋಳದ ಬಾಕಿ ಹಣ ಬಿಡುಗಡೆ, ರಸಗೊಬ್ಬರ ಕೊರತೆ ನಿವಾರಣೆಗೆ ಒತ್ತಾಯ



ರಾಯಚೂರು, ಜೂ.16-

ರೈತರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ (ಕೆಆರ್‌ಕೆಎಸ್) ರಾಜ್ಯ ಗೌರವಾಧ್ಯಕ್ಷ ಚಾಮರಸ್ ಮಾಲೀಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಲಾಯಿತು.

ಮುಂಗಾರು ಮಳೆ ಆರಂಭಗೊಂಡ ಹಿನ್ನೆಲೆಯಲ್ಲಿ ರೈತರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಕೊಂಡಿದ್ದರೂ, ಗುಣಮಟ್ಟದ ಬೀಜ, ರಸಗೊಬ್ಬರ ಕೊರತೆ, ನೀರಾವರಿ ಸೌಲಭ್ಯಗಳ ಅಭಾವ ಹಾಗೂ ಕೃಷಿಗೆ ಅಗತ್ಯ ಹಣಕಾಸಿನ ನೆರವು ಸಿಗದಿರುವುದು ರೈತರನ್ನು ಸಂಕಷ್ಟಕ್ಕೆ ತಳ್ಳಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಪ್ರತಿಭಟನೆಯ ಬಳಿಕ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ ರೈತ ಮುಖಂಡರು, ಸರ್ಕಾರ ರೈತರ ಸಮಸ್ಯೆಗಳತ್ತ ತಕ್ಷಣ ಗಮನಹರಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸರ್ಕಾರದ ಖರೀದಿ ಕೇಂದ್ರಗಳ ಮೂಲಕ ಖರೀದಿಸಲಾದ ಮುಂಗಾರು ಹಾಗೂ ಹಿಂಗಾರು ಜೋಳದ ಹಣ ಇನ್ನೂ ರೈತರ ಖಾತೆಗೆ ಜಮಾ ಆಗದಿರುವುದರಿಂದ ರೈತರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಬಾಕಿ ಹಣವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ರಸಗೊಬ್ಬರ ವಿತರಣೆಯಲ್ಲಿ ಕೊರತೆ ಉಂಟಾಗಿದ್ದು, ಕೆಲವೆಡೆ ರಸಗೊಬ್ಬರ ಖರೀದಿಗೆ ಇತರೆ ಉತ್ಪನ್ನಗಳನ್ನು ಕಡ್ಡಾಯವಾಗಿ ಖರೀದಿಸುವಂತೆ ಒತ್ತಡ ಹೇರಲಾಗುತ್ತಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು, ಲಿಂಕ್ ಮಾರಾಟ ಹಾಗೂ ಹೆಚ್ಚುವರಿ ದರ ವಸೂಲಿಯನ್ನು ತಕ್ಷಣ ನಿಲ್ಲಿಸಬೇಕು ಎಂದು ಒತ್ತಾಯಿಸಿದರು.

ತುಂಗಭದ್ರ ಎಡದಂಡೆ ನಾಲೆಯ ವ್ಯಾಪ್ತಿಯ ಮಾನವಿ, ಸಿರವಾರ, ರಾಯಚೂರು ಹಾಗೂ ಸಿಂಧನೂರು ತಾಲೂಕಿನ ಉಪಕಾಲುವೆಗಳಲ್ಲಿ ಹೂಳು ಮತ್ತು ಗಿಡಗಂಟಿ ತೆರವುಗೊಳಿಸಿ ವಾರಬಂದಿ ಪದ್ಧತಿಯಂತೆ ನೀರು ಹಂಚಿಕೆ ಮಾಡಬೇಕು ಎಂದು ಮನವಿ ಸಲ್ಲಿಸಲಾಯಿತು. ಜೊತೆಗೆ ಅನಧಿಕೃತ ಪೈಪ್‌ಗಳು ಮತ್ತು

3ನೇ ಪುಟ.....

ಉತ್ತರ ಕರ್ನಾಟಕದ ಬಲಗೈ ಸಮುದಾಯಕ್ಕೆ ಸಚಿವ ಸ್ಥಾನ ನೀಡಲಿ: ಭೀಮಣ್ಣ ಮಂಚಾಲ ಆಗ್ರಹ

ಪ್ರಸಾದ್ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡಲು ಒತ್ತಾಯ



ರಾಯಚೂರು,ಜು.16-

ರಾಜ್ಯ ಸಚಿವ ಸಂಪುಟದ ಮುಂದಿನ ವಿಸ್ತರಣೆಯಲ್ಲಿ ಪ್ರಸಾದ್ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡುವಂತೆ ಕರ್ನಾಟಕ ರಾಜ್ಯ ಬಲಗೈ ಜಾತಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಭೀಮಣ್ಣ ಮಂಚಾಳ ಒತ್ತಾಯಿಸಿದರು.

ನಗರದ ನೃಪತುಂಗ ಹೋಟೆಲ್ ನಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಉತ್ತರ ಕರ್ನಾಟಕದ ಬಲಗೈ ಸಮುದಾಯಕ್ಕೆ ಸಮರ್ಪಕ ಪ್ರಾತಿನಿಧ್ಯ ದೊರೆತಿಲ್ಲ ಎಂದು ಹೇಳಿದರು.

ರಾಜ್ಯದಲ್ಲಿ ಬಲಗೈ ಸಮುದಾಯದಿಂದ ಕಾಂಗ್ರೆಸ್ ಪಕ್ಷದ 9ರಿಂದ 10 ಶಾಸಕರು ಆಯ್ಕೆಯಾಗಿದ್ದರೂ, ಮೈಸೂರು ಹಾಗೂ ಕಲಬುರಗಿ ವಿಭಾಗಗಳಿಗೆ ಮಾತ್ರ ಸಚಿವ ಸ್ಥಾನ ದೊರೆತಿದ್ದು, ಬೆಳಗಾವಿ ವಿಭಾಗದ ಸಮುದಾಯದ ನಾಯಕರಿಗೆ ಅವಕಾಶ ಸಿಗದಿರುವುದು ಬೇಸರದ ಸಂಗತಿ ಎಂದು ತಿಳಿಸಿದರು.

ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಪ್ರಸಾದ್ ಅಬ್ಬಯ್ಯ ಅವರು ಜನಪರ ಆಡಳಿತ, ಅಭಿವೃದ್ಧಿ ಕಾರ್ಯಗಳು ಹಾಗೂ ಎಲ್ಲ ಧರ್ಮಗಳ ಜನರೊಂದಿಗೆ ಉತ್ತಮ ಬಾಂಧವ್ಯ ಹೊಂದಿರುವ ನಾಯಕರೆಂದು ಶ್ಲಾಘಿಸಿದ ಅವರು,

3ನೇ ಪುಟ.....

ಬೈಕ್ ಕಳ್ಳರ ಜಾಲ ಪತ್ತೆ: ಪಿಎಸ್ಐ ಎರಿಯಪ್ಪ ನೇತೃತ್ವದಲ್ಲಿ ಬೈಕ್ ಕಳ್ಳರ ಬಂಧನ



ಸಿಂಧನೂರು,

ತಾಲೂಕಿನ ಬಳಗಾನೂರು ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಬೈಕ್ ಕಳ್ಳತನ ಪ್ರಕರಣವನ್ನು ಭೇದಿಸುವಲ್ಲಿ ಪಿಎಸ್ಐ ಎರಿಯಪ್ಪ ನೇತೃತ್ವದ ಪೊಲೀಸ್ ತಂಡ ಯಶಸ್ವಿಯಾಗಿದ್ದು.ವಿವಿಧ ಠಾಣಾ ವ್ಯಾಪ್ತಿಗಳಲ್ಲಿ ಕಳುವಾಗಿದ್ದ 35.20 ಲಕ್ಷ ರೂ.ಮೌಲ್ಯದ 50 ಬೈಕ್‌ಗಳನ್ನು ಜಪ್ತಿ ಮಾಡಿ ಪ್ರಶಂಸೆಗೆ ಪಾತ್ರವಾಗಿದೆ.

ಜನವರಿ 30ರಂದು ಬಳಗಾನೂರು ಠಾಣಾ ವ್ಯಾಪ್ತಿಯ ಹನುಮಗೌಡ ಅವರ ರಾಯಲ್ ಎನ್‌ಫೀಲ್ಡ್ ಕಳುವಾಗಿದ್ದ ಪ್ರಕರಣ ದಾಖಲಾದ ಬಳಿಕ ತನಿಖೆ ಆರಂಭಿಸಿದ ಪೊಲೀಸರು ಆರೋಪಿಗಳನ್ನು ಬಂಧಿಸಿ ವಿಚಾರಣೆ ನಡೆಸಿದಾಗ ದೊಡ್ಡ ಪ್ರಮಾಣದ ಬೈಕ್ ಕಳ್ಳತನ ಜಾಲ ಬಯಲಾಗಿದೆ.

ರಾತ್ರಿ ವೇಳೆ ಮನೆಗಳ ಮುಂದೆ ನಿಲ್ಲಿಸಿದ್ದ ಬೈಕ್‌ಗಳನ್ನು ಗುರಿಯಾಗಿಸಿಕೊಂಡಿದ್ದ ಐವರು ಆರೋಪಿಗಳ ತಂಡ ವಿವಿಧ ಠಾಣಾ ವ್ಯಾಪ್ತಿಗಳಲ್ಲಿ ನಿರಂತರವಾಗಿ ಕಳ್ಳತನ ನಡೆಸುತ್ತಿತ್ತು.ತನಿಖೆಯ ವೇಳೆ ರಾಜ್ಯದ ವಿವಿಧ ಜಿಲ್ಲೆಗಳು ಹಾಗೂ ನೆರೆಯ ಆಂಧ್ರ ಪ್ರದೇಶದಲ್ಲಿ ಮಾರಾಟವಾಗಿದ್ದ ವಾಹನಗಳನ್ನು ಪೊಲೀಸರು ಪತ್ತೆಹಚ್ಚಿ ವಶಪಡಿಸಿಕೊಂಡಿದ್ದಾರೆ.

5 ಆರೋಪಿಗಳ ಬಂಧನ: ತನಿಖೆಯಲ್ಲಿ ಮಸ್ಕಿ ಮೂಲದ ಚನ್ನಬಸವ ಹೂಗಾರ, ರಾಘವೇಂದ್ರ ಹಾಗೂ ಮೈಬೂಬ್ ಬೈಕ್‌ಗಳನ್ನು ಕಳವು ಮಾಡಿ,ಆಂಧ್ರ ಪ್ರದೇಶದ ರಫೀಕ್ ಮತ್ತು ಮಹ್ಮದ್ ಲಾಲ್ ಅವರಿಗೆ ಮಾರಾಟ ಮಾಡುತ್ತಿದ್ದ ಮಾಹಿತಿ ಬೆಳಕಿಗೆ ಬಂದಿದೆ.ಸದ್ಯ ಐವರನ್ನು ಬಂಧಿಸಲಾಗಿದ್ದು, ಇನ್ನಿಬ್ಬರು ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

ವಿವಿಧ ಠಾಣಾ ವ್ಯಾಪ್ತಿಗಳಿಂದ ವಶ: ಜಪ್ತಿ ಮಾಡಲಾದ ಬೈಕ್‌ಗಳಲ್ಲಿ ಬಳಗಾನೂರು ಠಾಣೆ ವ್ಯಾಪ್ತಿಯ 2,ಮಸ್ಕಿ 15,ಲಿಂಗಸುಗೂರು 5,ಕವಿತಾಳ 6,ಸಿರವಾರ 2,ಮುದಗಲ್ 2,ಸಿಂಧನೂರು ಗ್ರಾಮೀಣ 4,ತುರ್ವಿಹಾಳ 2,ಹಟ್ಟಿ 1 ಸೇರಿದಂತೆ ವಿವಿಧ ಠಾಣೆಗಳ ವ್ಯಾಪ್ತಿಯ ಒಟ್ಟು 50 ಬೈಕ್‌ಗಳು ಸೇರಿವೆ.

ಬಳಗಾನೂರ ಪೊಲೀಸ್ ಠಾಣೆಯ ಪಿಎಸ್ಐ ಎರಿಯಪ್ಪ ನೇತೃತ್ವದ ತಂಡದಲ್ಲಿ ಸಿದ್ದಪ್ಪ, ವೆಂಕಟೇಶ, ನಿರುಪಾದಿ,

3ನೇ ಪುಟ.....



ಶುದ್ಧ. ಸ್ಪಷ್ಟ. ಮಾದರಿಯ ಮತದಾರರ ಪಟ್ಟಿ ತಯಾರಿಸುವುದೆ. ಎಸ್.ಐ.ಆರ್ ಕಾರ್ಯಕ್ರಮ. ಡಾ. ಬಿರಾದಾರ

ರಾಯಚೂರು,ಜೂ.16-

ಭಾರತ ದೇಶದ ವಿವಿಧ ರಾಜ್ಯಗಳಲ್ಲಿ ಈಗಾಗಲೇ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಯ ಎಸ್.ಐ.ಆರ್ ಕಾರ್ಯಕ್ರಮ ನಡೆಯುತ್ತದೆ .ಅದ್ದರಿಂದ ನಮ್ಮ ರಾಜ್ಯದ ನಮ್ಮ ಜಿಲ್ಲೆಯಲ್ಲಿ ಈ ಒಂದು ಪ್ರಕ್ರಿಯೆ ಪ್ರಾರಂಭವಾಗಿದೆ. ಪ್ರತಿ ಅಹರ ನಾಗರಿಕನ ಹೆಸರು ಮತದಾರರ ಪಟ್ಟಿಯಲ್ಲಿರಬೇಕು. ಮತದಾರ ಪಟ್ಟಿ ಸರಿಯಾಗಿ ಮಾಡುವುದರ ಮೂಲಕ ಪ್ರಜಾಪ್ರಭುತ್ವದ ಆಡಳಿತವನ್ನು ಬಲಗೊಳ್ಳಬೇಕು .ಯಾವುದೇ ಕಾರಣಕ್ಕೂ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಹೊರಗೆ ಉಳಿಯಬಾರದು. ನಮ್ಮ ಆಧಾರದ ಮತದಾರ ಗುರುತಿನ ಚೀಟಿ ಇರಬೇಕು. ಮತದಾನದ ಹಕ್ಕು ನಮ ಹಕ್ಕು .ಜೊತೆಗೆ ಚುನಾವಣೆಗಳ ಪಾರದರ್ಶಕವಾದರೆ ಅದರಂತೆ ಮತದಾರರ ಪಟ್ಟಿ ಪಾರದರ್ಶಕವಾಗಿರಬೇಕು .ಪ್ರತಿಯೊಬ್ಬ ಅರ್ಹ ಮತದಾರರು ತಮ್ಮ ಮತಗಟ್ಟೆಯ ಅಧಿಕಾರಿಯನ್ನು ಸಂಪರ್ಕ ಮಾಡಿ. ಅವರು ಕೇಳಿದ ಮಾಹಿತಿಯನ್ನು ನೀಡಿ ಯಾವುದೇ ಕಾರಣಕ್ಕೂ ಮತದಾರ ಪಟ್ಟಿಯಿಂದ ಹೊರಗೆ ಉಳಿಯದೆ ತಮ್ಮ ಹೆಸರನು ಕಡಾಯ

3ನೇ ಪುಟ.....

ಕರ್ನಾಟಕದಲ್ಲಿ 'ಕರ್ತವ್ಯ' ಕ್ರಾಂತಿ: ಸ್ವದೇಶಿ ಎಐ ತಂತ್ರಜ್ಞಾನದ ಹೊಸ ಹೆಜ್ಜೆ

ಬಳ್ಳಾರಿ,ಜೂ.16

ರಾಜ್ಯ ಸಾರ್ವಜನಿಕ ಆಡಳಿತದಲ್ಲಿ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ದಕ್ಷತೆಯನ್ನು ಹೆಚ್ಚಿಸಲು ಕರ್ನಾಟಕ ಸರ್ಕಾರವು 'ಕರ್ತವ್ಯ' (KAAMS - Karnataka Advanced Attendance Management System) ಎಂಬ ನೂತನ ಮುಂದುವರಿದ ಹಾಜರಾತಿ ನಿರ್ವಹಣಾ ತಂತ್ರಜ್ಞಾನವನ್ನು ಜಾರಿಗೆ ತಂದಿದೆ.

ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಇಲಾಖಾ ಕಾರ್ಯದರ್ಶಿಗಳೊಂದಿಗೆ ನಡೆಸಿದ ಮೊದಲ ಸಭೆಯಲ್ಲೇ ಸರ್ಕಾರಿ ನೌಕರರು ಹಾಗೂ ಅಧಿಕಾರಿಗಳು ಕಚೇರಿ ವೇಳೆಯಲ್ಲಿ ಕಡ್ಡಾಯವಾಗಿ ಶೇ.100 ಹಾಜರಿರಬೇಕು ಮತ್ತು ಸಾರ್ವಜನಿಕರ ಕುಂದುಕೊರತೆಗಳಿಗೆ ತಕ್ಷಣ ಸ್ಪಂದಿಸಬೇಕು ಎಂದು ಖಡಕ್ ಸೂಚನೆ ನೀಡಿದ್ದರು.

ಈ ಹಿಂದೆ ಜಾರಿಯಲ್ಲಿದ್ದ ಬಯೋಮೆಟ್ರಿಕ್ ವ್ಯವಸ್ಥೆಯಲ್ಲಿ ಉದ್ಯೋಗಿಗಳು ಕೇವಲ ಡಿಜಿಟಲ್ ಸಹಿ ಮಾಡಿ ಕಚೇರಿಯಿಂದ ಗೈರಾಗುವ ಸಾಧ್ಯತೆಗಳಿದ್ದವು. ಈ ದೋಷವನ್ನು ನಿವಾರಿಸಲು, ಉದ್ಯೋಗಿಗಳ ಭೌತಿಕ ಉಪಸ್ಥಿತಿ ಮತ್ತು ಕಚೇರಿಯ ಭೌಗೋಳಿಕ ಸ್ಥಳವನ್ನು (Geographical Location) ನಿಖರವಾಗಿ ಪತ್ತೆಹಚ್ಚುವ ಈ ಹೊಸ ವ್ಯವಸ್ಥೆಯನ್ನು ರೂಪಿಸಲಾಗಿದೆ.

ಸಂಪೂರ್ಣ 'ಮೇಡ್-ಇನ್-ಕರ್ನಾಟಕ' ಆವಿಷ್ಕಾರ:

ಯಾವುದೇ ಬಾಹ್ಯ ಖಾಸಗಿ ತಂತ್ರಜ್ಞಾನ ಸಂಸ್ಥೆಗಳ ನೆರವಿಲ್ಲದೆ, ಸಂಪೂರ್ಣವಾಗಿ ಸರ್ಕಾರದ ಪರಿಸರ ವ್ಯವಸ್ಥೆಯಲ್ಲೇ 'ಕರ್ತವ್ಯ' ಸಾಫ್ಟ್‌ವೇರ್ ಅನ್ನು ವಿನ್ಯಾಸಗೊಳಿಸಿ ಅಭಿವೃದ್ಧಿಪಡಿಸಲಾಗಿದೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ-ಆಡಳಿತ) ಉಸ್ತುವಾರಿಯಲ್ಲಿ, ಸೆಂಟರ್ ಫಾರ್ ಇ-ಗವರ್ನೆನ್ಸ್ ಮತ್ತು ಕರ್ನಾಟಕ ಎಐ ಸೆಲ್ (Karnataka AI Cell) ಜಂಟಿಯಾಗಿ ಇದನ್ನು ಸಿದ್ಧಪಡಿಸಿವೆ. ಇದರಿಂದಾಗಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ವೆಂಡರ್ ವೆಚ್ಚ ಉಳಿತಾಯವಾಗಿದ್ದು, ದತ್ತಾಂಶ ಸುರಕ್ಷತೆ ಮತ್ತು ಸ್ವಾಯತ್ತತೆ ಹೆಚ್ಚಾಗಿದೆ. ಕರ್ನಾಟಕದ ಈ ಯಶಸ್ವಿ ಮಾದರಿಯನ್ನು ದೇಶದ ಇತರೆ ರಾಜ್ಯಗಳೂ ಅಳವಡಿಸಿಕೊಳ್ಳಬಹುದಾಗಿದೆ.

ತಂತ್ರಜ್ಞಾನದ ಪ್ರಮುಖ ವೈಶಿಷ್ಟ್ಯಗಳು:

ಕೃತಕ ಬುದ್ಧಿಮತ್ತೆ (ಎಐ) ಆಧಾರಿತ ಮುಖ ಗುರುತಿಸುವಿಕೆ - ವಂಚನೆಯ ಹಾಜರಾತಿಯನ್ನು ತಡೆಯಲು ಲೈವ್‌ನೆಸ್ ಡಿಟೆಕ್ಷನ್ ತಂತ್ರಜ್ಞಾನದೊಂದಿಗೆ ಎಐ ಫೇಶಿಯಲ್ ರೆಕಗ್ನಿಷನ್ ಬಳಸಲಾಗಿದೆ.

ಜಿಯೋಫೆನ್ಸಿಂಗ್ - ಜಿಐಎಸ್ ತಂತ್ರಜ್ಞಾನದ ಮೂಲಕ ಉದ್ಯೋಗಿ ತನ್ನ ಕಚೇರಿಯ ನಿಗದಿತ ಪರಿಧಿಯೊಳಗೆ ಇದ್ದಾಗ ಮಾತ್ರ ಹಾಜರಾತಿ ದಾಖಲಿಸಲು ಸಾಧ್ಯವಾಗುತ್ತದೆ.



ಸಂಯೋಜಿತ ಡೇಟಾಬೇಸ್ - ಇದನ್ನು ಆಧಾರ್ ಇ-ಕೆವೈಸಿ ಮತ್ತು ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆಯೊಂದಿಗೆ ಸಂಯೋಜಿಸಲಾಗಿದೆ.

ಮೊಬೈಲ್ ಆಪ್ ಮತ್ತು ರಜೆ ನಿರ್ವಹಣೆ - ಆಂಡ್ರಾಯ್ಡ್ ಮತ್ತು ಐಒಎಸ್ ಆಪ್‌ಗಳ ಮೂಲಕ ಹಾಜರಾತಿ, ರಜೆ ಮತ್ತು ಅಧಿಕೃತ ಹೊರಗಿನ ಕೆಲಸದ ವಿವರಗಳನ್ನು ದಾಖಲಿಸುವ ಸೌಲಭ್ಯವಿದೆ.

ಇಲಾಖೆಗಳಲ್ಲಿ ದಾಖಲೆ ವೇಗದ ಅನುಷ್ಠಾನ:

ಮುಖ್ಯಮಂತ್ರಿಗಳ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಈ ತಂತ್ರಜ್ಞಾನವು ಇಲಾಖೆಗಳಲ್ಲಿ ಅತ್ಯಂತ ವೇಗವಾಗಿ ಅನುಷ್ಠಾನಗೊಳ್ಳುತ್ತಿದೆ. ಕಳೆದ ವಾರ ಅಂದಾಜು 2,46,000 ರಷ್ಟಿದ್ದ ಒಟ್ಟು ನೋಂದಾಯಿತ ಉದ್ಯೋಗಿಗಳ ಸಂಖ್ಯೆ ಪ್ರಸ್ತುತ ವಾರದಲ್ಲಿ 3,01,034 ಕ್ಕೆ ಏರಿಕೆಯಾಗಿದೆ. ಇದು ಕೇವಲ ಒಂದೇ ವಾರದಲ್ಲಿ ಶೇ.25 ಕ್ಕಿಂತಲೂ ಹೆಚ್ಚು (55,000ಕ್ಕೂ ಅಧಿಕ ಹೊಸ ಸೇರ್ಪಡೆ) ಬೆಳವಣಿಗೆಯಾಗಿದೆ. ಇದೇ ಅವಧಿಯಲ್ಲಿ, ಆಪ್ ಮೂಲಕ ಪ್ರತಿದಿನ ದಾಖಲಾಗುವ ದೈನಂದಿನ ಹಾಜರಾತಿ ಸಂಖ್ಯೆಯು ಸಹ 1,85,308 ರಿಂದ 2,32,612 ಕ್ಕೆ ಜಿಗಿದಿದ್ದು, ಸಕ್ರಿಯ ಬಳಕೆಯಲ್ಲಿ ಶೇ.25 ರಷ್ಟು ಭಾರಿ ಏರಿಕೆ ದಾಖಲಾಗಿದೆ.

ಪ್ರಸ್ತುತ 42 ಇಲಾಖೆಗಳ 4,78,522 ನೌಕರರನ್ನು ಈ ವ್ಯವಸ್ಥೆಗೆ ಒಳಪಡಿಸಲಾಗಿದ್ದು, ಈ ಪೈಕಿ 3.01 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳು ಈಗಾಗಲೇ ನೋಂದಾಯಿಸಿಕೊಂಡಿದ್ದಾರೆ. ಕೇವಲ ಒಂದೇ ವಾರದಲ್ಲಿ ನೋಂದಣಿ ಪ್ರಕ್ರಿಯೆಯಲ್ಲಿ ಶೇ.25 ರಷ್ಟು ಅಭೂತಪೂರ್ವ ಪ್ರಗತಿ ಕಂಡುಬಂದಿದೆ.

ಶಾಲಾ ಶಿಕ್ಷಣ ಇಲಾಖೆ: ಒಟ್ಟು 1,76,055 ಉದ್ಯೋಗಿಗಳಲ್ಲಿ ಈಗಾಗಲೇ 1,68,252 ನೌಕರರು ನೋಂದಾಯಿಸಿಕೊಂಡಿದ್ದು, 1,41,800ಕ್ಕೂ ಹೆಚ್ಚು ದೈನಂದಿನ ಚೆಕ್-ಇನ್‌ಗಳೊಂದಿಗೆ ಮೊದಲ ಸ್ಥಾನದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ: 66,969 ನೋಂದಣಿ ಹಾಗೂ 54,400ಕ್ಕೂ ಹೆಚ್ಚು ದೈನಂದಿನ ಹಾಜರಾತಿಯೊಂದಿಗೆ ಎರಡನೇ ಸ್ಥಾನದಲ್ಲಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಗಳಲ್ಲಿ ಪ್ರಾಯೋಗಿಕವಾಗಿ ಯಶಸ್ವಿಯಾದ ನಂತರ, ಶಾಲಾ ಶಿಕ್ಷಣ ಇಲಾಖೆಯ ಸಿಬ್ಬಂದಿ ಇದನ್ನು ಸಕ್ರಿಯವಾಗಿ ಬಳಸುತ್ತಿದ್ದಾರೆ. ಇನ್ನುಳಿದ ಹಲವು ಇಲಾಖೆಗಳು ಈಗಾಗಲೇ ಶೇ.90 ಕ್ಕಿಂತ ಹೆಚ್ಚು ನೋಂದಣಿ ಮೈಲಿಗಲ್ಲನ್ನು ದಾಟಿವೆ.

ಇತರ ಇಲಾಖೆಗಳು: ಪದವಿ ಪೂರ್ವ ಮಂಡಳಿ, ಆಯುಷ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮತ್ತು ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಗಳು ಈಗಾಗಲೇ ಶೇ.90 ಕ್ಕಿಂತ ಹೆಚ್ಚು ನೋಂದಣಿ ಗುರಿಯನ್ನು ಯಶಸ್ವಿಯಾಗಿ ತಲುಪಿವೆ.

ಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿಗಳು ಮತ್ತು ಜಿಲ್ಲಾ ಮಟ್ಟದಲ್ಲಿ ಡಿಸಿ/ಸಿಇಒಗಳು ದಿನನಿತ್ಯ ಈ ವ್ಯವಸ್ಥೆಯ ಡ್ಯಾಶ್‌ಬೋರ್ಡ್ ಅನ್ನು ಮೇಲ್ವಿಚಾರಣೆ ಮಾಡುತ್ತಿದ್ದಾರೆ.

ಕಚೇರಿ ಅವಧಿಯಲ್ಲಿ ಅಧಿಕಾರಿಗಳು ಸಾರ್ವಜನಿಕರಿಗೆ ಸಿಗದಿರುವ ಬಗ್ಗೆ ನಾಗರಿಕರು ನೀಡುವ ಪ್ರತಿಕ್ರಿಯೆ ಈ ಸುಶಾಸನದ ಗುರಿಯನ್ನು ತಲುಪಲು ಪ್ರಮುಖ ಪಾತ್ರ ವಹಿಸಲಿದೆ.

ಸಾರ್ವಜನಿಕರಿಗೆ ಸಿಗಲಿದೆ ಉತ್ತಮ ಸೇವೆ:

ಸಾರ್ವಜನಿಕ ಸೇವೆಗೆ ಹೊಸ ವೇಗ- ಮೊಬೈಲ್ ಮೂಲಕವೇ ಹಾಜರಾತಿ ದಾಖಲಿಸುವ ಸೌಲಭ್ಯ ಇರುವುದರಿಂದ ಕಚೇರಿಗಳ ಮುಂಭಾಗದಲ್ಲಿ ಬಯೋಮೆಟ್ರಿಕ್‌ಗಾಗಿ ಸಾಲಿನಲ್ಲಿ ನಿಲ್ಲುವುದು ತಪ್ಪಿದೆ ಎಂದು ಸರ್ಕಾರಿ ನೌಕರರು ಸಂತಸ ವ್ಯಕ್ತಪಡಿಸಿದ್ದಾರೆ.

ಕರ್ತವ್ಯ ಆಪ್ ಪ್ರತಿಯೊಬ್ಬ ಸರ್ಕಾರಿ ನೌಕರನೂ ತನ್ನ ಜವಾಬ್ದಾರಿಯನ್ನು ಹೆಮ್ಮೆ, ಶಿಸ್ತು ಮತ್ತು ನಿರ್ದಿಷ್ಟ ಉದ್ದೇಶದೊಂದಿಗೆ ನಿರ್ವಹಿಸಲು ಶಕ್ತಿ ತುಂಬುತ್ತಿದೆ.

ಅಂತಿಮವಾಗಿ, ಕಚೇರಿಗಳಲ್ಲಿ ಅಧಿಕಾರಿಗಳ ಭೌತಿಕ ಲಭ್ಯತೆ ಮತ್ತು ವಿಶ್ವಾಸಾರ್ಹತೆಯನ್ನು ಖಾತರಿಪಡಿಸುವ ಮೂಲಕ ಸಾರ್ವಜನಿಕರಿಗೆ ಸಿಗುವ ಸೇವೆಗಳು ಇನ್ನು ಮುಂದೆ ಹೆಚ್ಚು ಸುಲಭ ಹಾಗೂ ತಡೆರಹಿತವಾಗಲಿವೆ. ಈ ಮೂಲಕ ಕರ್ನಾಟಕವು ಡಿಜಿಟಲ್ ಆಡಳಿತ ಮತ್ತು ನಾಗರಿಕ ಕೇಂದ್ರಿತ ಸುಧಾರಣೆಯಲ್ಲಿ ದೇಶದಲ್ಲೇ ಮುಂಚೂಣಿ ರಾಜ್ಯವಾಗಿ ಹೊರಹೊಮ್ಮಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಜಿಲ್ಲೆಯಲ್ಲಿನ ಶಾಲಾ-ಕಾಲೇಜು ಕಟ್ಟಡಗಳ ಸ್ಥಿತಿಗತಿ ಕುರಿತು ವರದಿ ನೀಡಲು ಜಿ.ಪಂ ಸಿಇಓ ಸೂಚನೆ

ಕಲಬುರಗಿ, ಜೂ.16

ಕಲಬುರಗಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಲ್ಲಿ ಶಾಲಾ ಕಟ್ಟಡಗಳ ಮೇಲ್ಚಾವಣಿ ಪದರ ಕುಸಿದು ಬಿದ್ದಿರುವ ಪ್ರಕರಣಗಳು ಕಂಡುಬಂದಿರುವ ಪ್ರಯುಕ್ತ ಇಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಸಂಕನೂರ ಅವರ ಅಧ್ಯಕ್ಷತೆಯಲ್ಲಿ ಸಂಬಂಧಿಸಿದ ಅಧಿಕಾರಗಳ ಸಭೆ ಹಮ್ಮಿಕೊಳ್ಳಲಾಗಿತ್ತು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಕಲಬುರಗಿ ಹಿರಿಯ ಅಧಿಕಾರಿಗಳು, ಶಿಕ್ಷಣ ಇಲಾಖೆ ಹಾಗೂ ಪಂಚಾಯತ್ ರಾಜ್, ಕೆ.ಆರ್.ಐ.ಡಿ.ಎಲ್ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

ಜಿಲ್ಲೆಯಲ್ಲಿನ ಸರಕಾರಿ ಶಾಲೆಗಳ ಕಟ್ಟಡದ ಪ್ರಸ್ತುತ ಸ್ಥಿತಿ ಗತಿಗಳ ಕುರಿತು ಜಿಲ್ಲೆಯ ಎಲ್ಲಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರಿಗೆ ಜಂಟಿಯಾಗಿ ತಮ್ಮ ತಾಲೂಕಿನ ಸರಕಾರಿ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಜಂಟಿ ವರದಿಯನ್ನು ಕೂಡಲೇ ಸಲ್ಲಿಸಲು ಸೂಚಿಸಲಾಯಿತು.

ಈ ಕುರಿತು ಮೇಲುಸ್ತುವಾರಿ ಮಾಡಲು ಉಪ ನಿರ್ದೇಶಕರು ಶಾಲಾ ಶಿಕ್ಷಣ ಇಲಾಖೆ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ ಸೂಚಿಸುತ್ತಾ ರಿಪೇರಿ ಹಾಗೂ ಇನ್ನಿತರ ಸಣ್ಣ ಪುಟ್ಟ ದುರಸ್ತಿಗಳ ಶಾಲೆಗಳ ಪಟ್ಟಿ ಹಾಗೂ ದೊಡ್ಡ ಪ್ರಮಾಣದ ದುರಸ್ತಿ ಇದ್ದಲ್ಲಿ ಅಂತಹ ಪ್ರಸ್ತಾವನೆಯನ್ನು ತುರ್ತಾಗಿ ಸಲ್ಲಿಸಲು ಸಿಇಒ ಅವರು ತಿಳಿಸಿದರು.

ಮುಂದುವರೆದು, ಮುಂಬರುವ ದಿನಗಳಲ್ಲಿ ಯಾವುದೇ ಅನಾಹುತಗಳು ಆಗದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಲು ಸಂಬಂದಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚಿಸಿದರು.



ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆ: ಬಳ್ಳಾರಿಯಲ್ಲಿ ರಕ್ತದಾನ ಶಿಬಿರ ಆಯೋಜನೆ

ಬಳ್ಳಾರಿ,ಜೂ.15-

ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆಯ ಅಂಗವಾಗಿ, ಕೆಎಸ್‌ಸಿ-ಎಎಸ್‌ಐ ಬಳ್ಳಾರಿ ನಗರ ಶಾಖೆಯು ಬಿಎಂಸಿಆರ್‌ಸಿ ಯ ಅಂತಿಮ ವರ್ಷದ ಎಂ.ಬಿ.ಬಿ.ಎಸ್. ವಿದ್ಯಾರ್ಥಿಗಳಾದ 'ಅದ್ವೈತ ಬ್ಯಾಚ್' ಸಹಯೋಗದೊಂದಿಗೆ ಶನಿವಾರ, ಭಾನುವಾರ ಎರಡು ದಿನಗಳ ಕಾಲ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವು ಅತ್ಯಂತ ಯಶಸ್ವಿಯಾಗಿ ಜರುಗಿತು.

ಜೀವ ಉಳಿಸುವ ಹಾಗೂ ಸಮಾಜ ಸೇವೆಯ ಈ ಮಹತ್ವದ ಕಾರ್ಯಕ್ಕೆ ವೈದ್ಯಕೀಯ ವಿದ್ಯಾರ್ಥಿಗಳು, ವೈದ್ಯರು, ಆರೋಗ್ಯ ಸಿಬ್ಬಂದಿ ಹಾಗೂ ಸಾರ್ವಜನಿಕರಿಂದ ಅಭೂತ ಪೂರ್ವ ಸ್ಪಂದನೆ ವ್ಯಕ್ತವಾಯಿತು.

ಮುಖ್ಯ ಅತಿಥಿಯಾಗಿ ಬಿಎಂಸಿಆರ್‌ಸಿ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ ಅವರು ಭಾಗವಹಿಸಿ ಮಾತನಾಡಿ, ಸಮುದಾಯದ ಆರೋಗ್ಯ ಸೇವೆಗೆ ಸಂಬಂಧಿಸಿದ ಇಂತಹ ಸಾಮಾಜಿಕ ಕಾರ್ಯಗಳ ಅಗತ್ಯತೆ ಆವಶ್ಯಕವಾಗಿವೆ. ಸ್ವಯಂ ಪ್ರೇರಿತ ರಕ್ತದಾನ ಮತ್ತು ವೈದ್ಯಕೀಯ ವಲಯದಲ್ಲಿ ಸಾಮಾಜಿಕ ಜವಾಬ್ದಾರಿಯ ಮಹತ್ವ ಇನ್ನಷ್ಟು ಅರಿತುಕೊಳ್ಳಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕೆಎಸ್‌ಸಿ-ಎಎಸ್‌ಐ ಖಜಾಂಚಿ ಡಾ.ಯಾಳೆಗುರು ಬಸವನಗೌಡ, ಎಎಸ್‌ಐ ಕಾರ್ಯದರ್ಶಿ ಡಾ.ಗಡ್ಡಿ ದಿವಾಕರ್, ಕೆಎಸ್‌ಸಿ-ಎಎಸ್‌ಐ ಬಳ್ಳಾರಿ ನಗರ ಶಾಖೆಯ ಅಧ್ಯಕ್ಷ ಡಾ.ಶೇಕಪ್ಪ ಸಿ.ಮಾಳಗಿಮನಿ, ಕಾರ್ಯದರ್ಶಿ ಡಾ.ಗುಡೇಕೋಟೆ ರವಿಕುಮಾರ, ಜಂಟಿ ಕಾರ್ಯದರ್ಶಿ ಡಾ.ಶೈಖ್ ಫರ್ಹಾನ್ ಎಂ.ಬಿ. ಹಾಗೂ ಖಜಾಂಚಿ ಡಾ.ಅತುಲ್ ಕುಲಕರ್ಣಿ ಅವರು ರಕ್ತದಾನ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಿದ ಬಳ್ಳಾರಿ ನಗರ ಶಾಖೆಯ ಶ್ರಮವನ್ನು ಶ್ಲಾಘಿಸಿದರು.

ಕರುಣೆ, ಸೇವಾ ಮನೋಭಾವ ಹಾಗೂ ಸಮುದಾಯದ ಕಲ್ಯಾಣವನ್ನು ಬಿಂಬಿಸುವ ಈ ರಕ್ತದಾನ ಶಿಬಿರವು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಯಿತು.

ಈ ವೇಳೆ ಅದ್ವೈತ ಬ್ಯಾಚ್ ವಿದ್ಯಾರ್ಥಿಗಳು, ಅಧ್ಯಾಪಕ ವೃಂದ, ಸ್ನಾತಕೋತ್ತರ ಹಾಗೂ ಪದವಿಪೂರ್ವ ವೈದ್ಯಕೀಯ ವಿದ್ಯಾರ್ಥಿಗಳು, ಆರೋಗ್ಯ ಸಿಬ್ಬಂದಿ ಮತ್ತು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದ ಎಲ್ಲಾ ಮಹಾದಾನಿಗಳಿಗೆ ಆಯೋಜಕರು ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

ಬೂತ್ ಮಟ್ಟದ ಏಜೆಂಟರಗಳಿಗೆ ಎಸ್.ಐ.ಆರ್-2026ರ ಮಾಹಿತಿ ಕಾರ್ಯಾಗಾರ

ಮತದಾರರಿಗೆ ಎನುಮರೇಷನ್ ಫಾರಂ ಸಿಗುವಂತೆ ನೋಡಿಕೊಳ್ಳಿ-ಡಿಸಿ

ಕೊಪ್ಪಳ,ಜೂ.15

ಎಸ್.ಐ.ಆರ್ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಬಿ.ಎಲ್.ಓ.ಗಳು ಮನೆ ಮನೆಗೆ ಭೇಟಿ ನೀಡಲಿದ್ದು, ಈ ವೇಳೆ ಪ್ರತಿಯೊಬ್ಬ ಅರ್ಹ ಮತ ದಾರರಿಗೆ ಎನುಮರೇಷನ್ ಫಾರಂ ಸಿಗುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಹೇಳಿ ದರು.

ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮ ವಾರ (ಜೂ. 15ರಂದು) ಬೂತ್ ಮಟ್ಟದ ಏಜೆಂಟರುಗಳಿಗೆ (ಬಿ.ಎಲ್.ಎ) ವಿಶೇಷ ಸಮಗ್ರ ಪರಿಷ್ಕರಣೆ ಎಸ್.ಐ.ಆರ್-2026ರ ಮಾಹಿತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ ಇದುವರೆಗೂ ಒಟ್ಟು 7 ಬಾರಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಆಗಿದೆ. ಕಳೆದ ಬಾರಿ ಕರ್ನಾಟಕದಲ್ಲಿ 2002 ರಲ್ಲಿ ಎಸ್.ಐ.ಆರ್ ಆಗಿತ್ತು. 2002ರ ಮಾತದಾರರ ಪಟ್ಟಿಯಲ್ಲಿರು ವವರನ್ನು ಅರ್ಹ ಮತದಾರರೆಂದು ಪರಿಗಣಿಸಲಾಗುತ್ತಿದೆ. ಪ್ರಸ್ತುತ 2025ರ ಮಾತದಾರರ ಪಟ್ಟಿಯನ್ನು 2002ರ ಪಟ್ಟಿಯೊಂದಿಗೆ ಹೋಲಿಕೆ ಮಾಡಿ ಅವರನ್ನು ಮ್ಯಾಪಿಂಗ್ ಮಾಡಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಬಿ.ಎಲ್.ಎ ಮತ್ತು ಬಿ.ಎಲ್.ಓ.ಗಳ ಪಾತ್ರ ಬಹಳ ಮುಖ್ಯವಾಗಿದೆ ಎಂದರು.



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಗಳು ಪಾರದರ್ಶಕವಾಗಿ ನಡೆಯಬೇಕು. ಈ ದಿಶೆಯಲ್ಲಿ ಮತದಾರರ ಪಟ್ಟಿ ದೋಷ ರಹಿತವಾಗಿರಬೇಕು. ಹಾಗಾಗಿ ಎರಡು ಕಡೆ ಹೆಸರಿರುವ ಮತದಾರರನ್ನು ಪತ್ತೆ ಹಚ್ಚಿ ಪರಿಷ್ಕರಿಸಲಾಗುತ್ತದೆ. ಮತದಾರರ ಪಟ್ಟಿಯ ಪರಿಷ್ಕರಣೆಯು ಈ ಬಾರಿ ಸಂಪೂರ್ಣವಾಗಿ ಡಿಜಿಟಲೈಜ್ ಆಗಿ ನಡೆಯುತ್ತಿರುವುದರಿಂದ ಒಬ್ಬ ಮತದಾರನಿಗೆ ಎರಡು ಕಡೆ ಹೆಸರು ಉಳಿಸಿಕೊಳ್ಳುವುದಕ್ಕೆ ಯಾವುದೇ ಅವಕಾಶವಿಲ್ಲ. ಎಸ್.ಐ.ಆರ್ ಪ್ರಕ್ರಿಯೆಯಲ್ಲಿ 2025ರ ಮತದಾರರ ಪಟ್ಟಿಯಲ್ಲಿರುವ ಪ್ರತಿಯೊಬ್ಬರಿಗೂ ಎನುಮರೇಷನ್ ಫಾರಂ ಕೊಡಲಾಗುತ್ತದೆ. ಮತದಾರರು ಭರ್ತಿ ಮಾಡಿ, ಬಿ.ಎಲ್.ಓ.ಗಳಿಗೆ ನೀಡಿದ್ದಲ್ಲಿ ಅದನ್ನು ಅವರು ಆ್ಯಪ್ ಮೂಲಕ ಮುಂದಿನ ಕ್ರಮ ಕೈಗೊಳ್ಳುವರು ಎಂದರು.

ಬಿ.ಎಲ್.ಓ.ಗಳು ಮನೆ ಮನೆಗೆ ಭೇಟಿ ನೀಡಿ, ಎನುಮರೇಷನ್ ಫಾರಂ ನೀಡುವ ಸಂದರ್ಭದಲ್ಲಿ ಎಲ್ಲಾ ಬೂತ್ ಮಟ್ಟದ ಏಜೆಂಟರುಗಳು ಜಾಗೃತರಾಗಿ ಕಾರ್ಯ ನಿರ್ವಹಿಸಿ, ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಬಿಟ್ಟು ಹೋಗದಂತೆ ನೋಡಿಕೊಳ್ಳಬೇಕು. ಈ ಬಗ್ಗೆ ಬಿ.ಎಲ್.ಓ.ಗಳು ನಿಮ್ಮೊಂದಿಗೆ ಸಭೆ ಮಾಡಲಿದ್ದು, ಮತದಾರರಿಂದ ಎನುಮರೇಷನ್ ಫಾರಂ ಸಂಗ್ರಹಿಸಿ, ಅದನ್ನು ಬಿ.ಎಲ್.ಓ.ಗಳಿಗೆ ನೀಡಲು ಎಲ್ಲಾ ಬೂತ್ ಮಟ್ಟದ ಏಜೆಂಟರುಗಳಿಗೆ ಅವಕಾಶ ನೀಡಲಾಗಿದೆ. ಈ ವೇಳೆಯ ಮ್ಯಾಪಿಂಗ್ ಆಗದೇ ಇರುವ ಮತದಾರರ ಮ್ಯಾಪಿಂಗ್ ಮಾಡಿಸಲು ಸಹ ನೀವುಗಳು ಸಹರಿಸಬೇಕು ಎಂದು ಹೇಳಿದರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಎಸ್.ಐ.ಆರ್ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳಿಂದ ಈಗಾಗಲೇ ಬಿ.ಎಲ್.ಎ-1 ಮತ್ತು 2ನ್ನು ನೇಮಿಸಿಕೊಂಡಿದ್ದಾರೆ. ಬಿ.ಎಲ್.ಓ.ಗಳ ವಿವರಗಳುಳ್ಳ ಪಟ್ಟಿಯನ್ನು ಬೂತ್ ಮಟ್ಟದ ಏಜೆಂಟರುಗಳಿಗೆ ನೀಡಬೇಕು. ಇದರಿಂದ ಬಾಕಿ ಇರುವ ಮತದಾರರ ಮ್ಯಾಪಿಂಗ್ ಮಾಡಿಸಲು ಬಿ.ಎಲ್.ಎ.ಗಳಿಗೆ ಅನುಕೂಲವಾಗುತ್ತದೆ. ಈ ಕಾರ್ಯಕ್ರಮವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು ಎಂದರು.

ಸಂಸದರಾದ ಕೆ ರಾಜಶೇಖರ ಬಸವರಾಜ ಹಿಟ್ನಾಳ ಅವರು ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಪ್ರಯುಕ್ತ ನಮ್ಮ ಜಿಲ್ಲೆಯಲ್ಲಿ ಈಗಾಗಲೇ ಶೇ 92 ಕ್ಕಿಂತು ಹೆಚ್ಚಿನ ಪ್ರಮಾಣದಲ್ಲಿ ಮ್ಯಾಪಿಂಗ್ ಮಾಡಿದ್ದು, ರಾಜ್ಯದಲ್ಲಿ ನಮ್ಮ ಜಿಲ್ಲೆ ಮುಂಚೂಣಿಯಲ್ಲಿದೆ. ಎನುಮರೇಷನ್ ಫಾರಂ ಭರ್ತಿ ಮಾಡಿ ಸಲ್ಲಿಸುವುದು ತುಂಬಾ ಅವಶ್ಯಕವಾಗಿದ್ದು, ಈ ಪ್ರಕ್ರಿಯೆಯಲ್ಲಿ ಯಾವುದೇ ಅರ್ಹ ಮತದಾರರು ಬಿಟ್ಟು ಹೋಗದಂತೆ ಎಲ್ಲಾ ಬಿ.ಎಲ್.ಎ.ಗಳು ನೋಡಿಕೊಳ್ಳಬೇಕು ಎಂದು ಹೇಳಿದರು.

ಜೆಡಿಎಸ್ ಪಕ್ಷದ ಸಿ.ವಿ ಚಂದ್ರಶೇಖರ ಹಾಗೂ ಬಿಜೆಪಿಯ ವಿರೇಶ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು. ಜಿಲ್ಲಾ ಮಟ್ಟದ ಮಾಸ್ಟರ್ ಟ್ರೈನರ್ ವಿದ್ಯಾಧರ ಅವರು ಎಸ್.ಐ.ಆರ್ ಕುರಿತು ವಿವರವಾಗಿ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ, ಕಾಂಗ್ರೆಸ್ ಪಕ್ಷದ ಕೃಷ್ಣರೆಡ್ಡಿ ಸೇರಿ ದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು, ಬಿ.ಎಲ್.ಎ-1 ಮತ್ತು 2 ಹಾಗೂ ಇತರೆ ಅಧಿಕಾರಿ ಗಳು ಉಪಸ್ಥಿತರಿದ್ದರು.

ರಕ್ತದಾನವು ಜೀವ ಉಳಿಸುವ ಮಹಾದಾನ

ಯಾದಗಿರಿ, ಜೂ.16

ರಕ್ತದಾನವು ಜೀವ ಉಳಿಸುವ ಮಹಾದಾನವಾಗಿದ್ದು, ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಯೂ ನಿಯಮಿತವಾಗಿ ರಕ್ತದಾನ ಮಾಡುವ ಮೂಲಕ ಸಮಾಜದ ಸೇವೆಯಲ್ಲಿ ಪಾಲ್ಗೊಳ್ಳಬೇಕೆಂದು ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯದ ಡೀನ್ ಡಾ. ಅಮರೇಗೌಡರ ಕರೆ ನೀಡಿದರು.

ಅವರು ಇತ್ತೀಚಿಗೆ ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಕ್ತ ಕೇಂದ್ರ ಯಾದಗಿರಿ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಯಾದಗಿರಿ, ಎನ್.ಸಿ.ಸಿ. ಘಟಕ ಹಾಗೂ ಕೃಷಿ ಮಹಾವಿದ್ಯಾಲಯ ಭೀಮರಾಯನಗುಡಿ ಇವುಗಳ ಜಂಟಿ ಆಶ್ರಯದಲ್ಲಿ ಜೂನ್ 14 ರಂದು ಆಚರಿಸಲಾಗುವ ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಯಾದಗಿರಿ ಜಿಲ್ಲೆಯ ಭೀಮರಾಯನಗುಡಿಯ ಕೃಷಿ ಮಹಾವಿದ್ಯಾಲಯದ ಪ್ರೇಕ್ಷಾಗೃಹದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಯಂಪ್ರೇರಿತ ರಕ್ತದಾನಿಗಳಿಗೆ ಕೃತಜ್ಞತೆ ಸಲ್ಲಿಸಲು ಮತ್ತು ರಕ್ತದಾನದ ಮಹತ್ವದ ಬಗ್ಗೆ ಜನರಲ್ಲಿ ಅರಿವು ಮೂಡಿಸಲು ಈ ದಿನವನ್ನು ಮೀಸಲಿಡಲಾಗಿದೆ. ನೊಬೆಲ್ ಪ್ರಶಸ್ತಿ ವಿಜೇತ ವಿಜ್ಞಾನಿ ಕಾರ್ಲ್ ಲ್ಯಾಂಡ್ ಸ್ಟೈನರ್ ಅವರ ಜನ್ಮದಿನದ ಅಂಗವಾಗಿ ಜೂನ್ 14 ರಂದು ಈ ದಿನವನ್ನು ಆಚರಿಸಲಾಗುತ್ತದೆಂದರು.



? ಯಾದಗಿರಿ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಸಂಜೀವಕುಮಾರ್ ಸಿಂಗ್ ರಾಯಚೂರಕರ್ ಮಾತನಾಡಿ, ರಕ್ತಕ್ಕೆ ಯಾವುದೇ ಕೃತಕ ಪರ್ಯಾಯವಿಲ್ಲ. ಹಾಗಾಗಿ ಅಪಘಾತಕ್ಕೊಳಗಾದವರು, ಗರ್ಭಿಣಿಯರು, ಶಸ್ತ್ರಚಿಕಿತ್ಸೆಗೆ ಒಳಗಾಗುವವರು ಹಾಗೂ ಥಲಸೇಮಿಯಾ ಮತ್ತು ಕ್ಯಾನ್ಸರ್ ರೋಗಿಗಳಿಗೆ ರಕ್ತದ ಅವಶ್ಯಕತೆ ನಿರಂತರವಾಗಿರುತ್ತದೆ. ಯುವಜನರು ಮತ್ತು ಸಾರ್ವಜನಿಕರು ರಕ್ತದಾನದ ಬಗೆಗಿನ ತಪ್ಪು ಕಲ್ಪನೆಗಳನ್ನು ನಿವಾರಿಸಿಕೊಂಡು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಬೇಕು ಎಂದು ರಕ್ತದಾನದ ಅರ್ಹತಾ ಮಾನದಂಡಗಳು ಹಾಗೂ ಆರೋಗ್ಯಕರ ಪ್ರಯೋಜನಗಳ ಕುರಿತು ಮಾಹಿತಿ ನೀಡಿದರು.

? ?ಸಮಾರಂಭದ ಅಂಗವಾಗಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಜಾಗೃತಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಇದೇ ಸಂದರ್ಭದಲ್ಲಿ ಹಲವು ಬಾರಿ ರಕ್ತದಾನ ಮಾಡಿದ ದಾನಿಗಳನ್ನು ಸನ್ಮಾನಿಸಲಾಯಿತು.

? ರಕ್ತದಾನ ಶಿಬಿರದಲ್ಲಿ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಸ್ವಯಂಪ್ರೇರಿತರಾಗಿ ಭಾಗವಹಿಸಿದ್ದು, ಒಟ್ಟು 36 ಯೂನಿಟ್ ರಕ್ತವನ್ನು ಸಂಗ್ರಹಿಸಲಾಯಿತು. ಶಿಬಿರದಲ್ಲಿ ಆಯೋಜಿಸಲಾಗಿದ್ದ ಉಚಿತ ಕ್ಷ-ಕಿರಣ ಪರೀಕ್ಷೆಯ ಸೌಲಭ್ಯವನ್ನು ಒಟ್ಟು 78 ಜನರು ಪಡೆದುಕೊಂಡರು.

ಈ ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಡಾ. ಪಿ. ಹೆಚ್. ಕುಹನೂರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಲಕ್ಷ್ಮಿ ಮುಂಡಾಸ, ಪ್ರಭಾರ ಆರೋಗ್ಯ ಮೇಲ್ವಿಚಾರಣೆ ಅಧಿಕಾರಿ ತುಳಸಿರಾಮ ಚವಲಾಣ, ಪ್ರಭಾರ ಶಹಾಪುರ ತಾಲೂಕು ಆರೋಗ್ಯ ಅಧಿಕಾರಿ ಡಾ. ವಸುಧಾ ಕಟ್ಟಿ, ಏಡ್ಸ್ ನಿಯಂತ್ರಣ ಘಟಕದ ಜಿಲ್ಲಾ ಆಡಳಿತ ಸಹಾಯಕರಾದ ಅಂಬರೀಶ ಭೂತಿ ಹಾಗೂ ಮಹಾವಿದ್ಯಾಲಯದ ವಿದ್ಯಾರ್ಥಿಗಳು, ಎನ್.ಸಿ.ಸಿ. ಕೆಡೆಟ್‌ಗಳು ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆ, ಸ್ವಾಗತ ಮತ್ತು ವಂದನಾರ್ಪಣೆಯನ್ನು ಎನ್.ಸಿ.ಸಿ. ಅಧಿಕಾರಿಗಳಾದ ಡಾ. ಶರಣ ಭೂಪಾಲ ರೆಡ್ಡಿಯವರು ನೆರವೇರಿಸಿದರು.

ಉಚಿತ ಬಸ್ ಪಾಸ್ ವಿತರಿಸಿದ ಶಾಸಕ ಉಮೇಶ ಮೇಟಿ

ಬಾಗಲಕೋಟೆ, ಜೂ.16

ವಿದ್ಯಾರ್ಥಿಗಳ ಶಿಕ್ಷಣಕ್ಕೆ ಅನುಕೂಲವಾಗುವ ಉದ್ದೇಶದಿಂದ ರಾಜ್ಯ ಸರಕಾರ ಜಾರಿಗೆ ತಂದಿರುವ ಉಚಿತ ಬಸ್‌ಪಾಸ್ ಯೋಜನೆಯಡಿ ಶಾಸಕ ಉಮೇಶ ಮೇಟಿ ಅವರು ಸೋಮವಾರ ವಿದ್ಯಾರ್ಥಿಗಳಿಗೆ ಉಚಿತ ಬಸ್‌ಪಾಸ್ ವಿತರಿಸಿದರು.

ಬಾಗಲಕೋಟೆ ಹಳೆ ಬಸ್ ನಿಲ್ದಾಣದಲ್ಲಿ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಹಮ್ಮಿಕೊಂಡ ಉಚಿತ ಬಸ್‌ಪಾಸ್ ವಿತರಣಾ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಸಾಂಕೇತಿಕವಾಗಿ ಬಸ್ ಪಾಸ್‌ಗಳನ್ನು ವಿತರಿಸಿ ಮಾತನಾಡಿದ ಶಾಸಕರು ಅವರು ವಿದ್ಯಾರ್ಥಿಗಳು ನಮ್ಮ ದೇಶದ ಭವಿಷ್ಯವಾಗಿದ್ದು, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಸಾರಿಗೆ ವೆಚ್ಚ ದೊಡ್ಡ ಸವಾಲಾಗಿದ್ದು, ಉಚಿತ ಬಸ್ ಪಾಸ್ ಯೋಜನೆಯಿಂದ ವಿದ್ಯಾರ್ಥಿ ಗಳ ಶೈಕ್ಷಣಿಕ ಪ್ರಗತಿಗೆ ಸಹಕಾರಿಯಾಗಲಿದೆ ಎಂದು ತಿಳಿಸಿದರು.

ಶಿಕ್ಷಣವೇ ಸಮಾಜದ ಅಭಿವೃದ್ದಿಗೆ ಅಡಿಪಾಯವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆಯಬೇಕು. ಪೋಷಕರು ಸಹ ತಮ್ಮ ಮಕ್ಕಳ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡಬೇಕು. ರಾಜ್ಯ ಸರಕಾರವು ಶಿಕ್ಷಣ, ಯುವಜನತೆ ಮತ್ತು ಮಹಿಳೆಯರ ಸಬಲೀಕರಣಕ್ಕೆ ವಿಶೇಷ ಆದ್ಯತೆ ನೀಡುತ್ತಿದೆ. ವಿದ್ಯಾರ್ಥಿಗಳ ಕಲಿಕೆಯ ಹಾದಿಯನ್ನು ಸುಗಮಗೊಳಿಸಲು ಇಂತಹ ಯೋಜನೆಗಳು ನಿರಂತರವಾಗಿ ಜಾರಿಯಾಗುತ್ತಿವೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಉನ್ನತ ಶಿಕ್ಷಣ ಪಡೆದು ಸಮಾಜಕ್ಕೆ ಮಾದರಿಯಾಗಬೇಕು ಎಂದರು.



ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಅನೀಕುಮಾರ ದಡ್ಡಿ ಮಾತನಾಡಿ ಆರ್ಥಿಕವಾಗಿ ಹಿಂದುಳಿದ ಕುಟಂಬಗಳ ವಿದ್ಯಾರ್ಥಿಗಳಿಗೆ ಈ ಯೋಜನೆ ನೆರವಾಗಲಿದೆ. ಶಿಕ್ಷಣವೇ ಸಮಾಜದ ಅಭಿವೃದ್ದಿಗೆ ಮೂಲ ಆಧಾರವಾಗಿದ್ದು, ವಿದ್ಯಾರ್ಥಿಗಳು ಲಭ್ಯವಿರುವ ಸರ್ಕಾರದ ಸೌಲಭ್ಯವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಈಗಾಗಲೇ ಹಣ ಪಾವತಿಸಿ ಬಸ್ ಪಾಸ್ ಪಡೆದವರಿಗೆ ವಿದ್ಯಾರ್ಥಿಗಳ ಖಾತೆಗೆ ಮರಳಿ ಜಮೆ ಮಾಡಲಾಗುತ್ತಿದೆ. ಹೊಸದಾಗಿ ಅರ್ಜಿ ಸಲ್ಲಿಸುವವರು ಆನ್‌ಲೈನ್ ಮೂಲಕ ಅರ್ಜಿ ಹಾಕಿ ಉಚಿತ ಬಸ್‌ಪಾಸ್ ಪಡೆದುಕೊಳ್ಳಲು ತಿಳಿಸಿದರು. ಕಾರ್ಯಕ್ರಮದಲ್ಲಿ ಬುಡಾದ ಅಧ್ಯಕ್ಷ ಅಬ್ದುಲ್‌ರಜಾಕ ಬೇನೂರ, ತಹಶೀಲ್ದಾರ ವಾಸುದೇವ ಸ್ವಾಮಿ, ಸೇರಿದಂತೆ ನಾಗರಾಜ ಹದ್ಲಿ, ರಾಜು ಮನ್ನಿಕೇರಿ, ದ್ಯಾಮಣ್ಣ ಗಾಳಿ ಹಾಗೂ ಇತರರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಶಾಸಕರ ರೆಸಾರ್ಟ್ ಪಾಲಿಟಿಕ್ಸ್

ಪರಿಷತ್ ಅಭ್ಯರ್ಥಿ ಗೆಲ್ಲಲು ಬೇಕಾದ ನಿಗದಿತ ಕೋಟಾ 28 ಮತಗಳಾಗಿವೆ. ಒಬ್ಬ ಅಭ್ಯರ್ಥಿಗೆ ಗೆಲ್ಲಲು 28 ಮತಗಳು ಬೀಳಬೇಕು. ಆದರೆ, ಸಾಮಾನ್ಯವಾಗಿ ಒಂದು ಹೆಚ್ಚುವರಿ ಮತವನ್ನು ಹಾಕಲಾಗುತ್ತದೆ. ಆ ಮೂಲಕ 29 ಮತಗಳನ್ನು ಹಾಕಿಸಲಾಗುತ್ತದೆ. ಯಾವ ಅಭ್ಯರ್ಥಿ ಪರ ಎಷ್ಟು ಮತ ಹಾಕಬೇಕು ಎಂಬುದನ್ನು ಪಕ್ಷ ನಿರ್ಧರಿಸಲಿದೆ.

ಕಾಂಗ್ರೆಸ್ ಶಾಸಕರ ಸಂಖ್ಯಾಬಲ 135. ಕಾಂಗ್ರೆಸ್ ಇಬ್ಬರು ಅಭ್ಯರ್ಥಿಗಳಿಗೆ 29 ಮತಗಳನ್ನು ಹಾಕಿಸಿ, ಉಳಿದ ಇಬ್ಬರು ಅಭ್ಯರ್ಥಿಗಳಿಗೆ 28 ಮೊದಲ ಪ್ರಾಶಸ್ತ್ಯದ ಮತಗಳನ್ನು ಹಾಕಿಸುವ ಸಾಧ್ಯತೆ ಇದೆ. ಅಂಥ ಸನ್ನಿವೇಶದಲ್ಲಿ ತನ್ನ ಐದನೇ ಅಭ್ಯರ್ಥಿ ವಿನಯ್ ಕಾರ್ತಿಕ್‌ಗೆ ಮೊದಲ ಪ್ರಾಶಸ್ತ್ಯದ ಮತಗಳು 21 ಉಳಿಯಲಿವೆ. ಉಳಿದಂತೆ ಮೂವರು ಪಕ್ಷೇತರರು ಹಾಗೂ ಇಬ್ಬರು ಬಿಜೆಪಿ ಉಚ್ಚಾಟಿತ ಶಾಸಕರು ಬೆಂಬಲಿಸಿದರೆ 25 ಮತಗಳು ಬೀಳಲಿವೆ. ನಿಗದಿತ ಕೋಟಾ 28 ಮತಕ್ಕೆ 3 ಮತಗಳು ಕೊರತೆಯಾಗಲಿವೆ. ಈ ಮೂರು ಮತಗಳಿಗೆ ಕಾಂಗ್ರೆಸ್ ರಣತಂತ್ರ ಏನಿರಲಿದೆ ಎಂಬುದು ಗೊತ್ತಿಲ್ಲ.

ಈ ವೇಳೆ ಎರಡನೇ ಪ್ರಾಶಸ್ತ್ಯದ ಮತಗಳನ್ನು ಪರಿಗಣಿಸಲಾಗುತ್ತದೆ. ಮೊದಲ ಪ್ರಾಶಸ್ತ್ಯದಲ್ಲಿ ಯಾರಿಗೂ ನಿಗದಿತ ಕೋಟಾ ಸಿಗದಿದ್ದಾಗ, ಅತ್ಯಂತ ಕಡಿಮೆ ಮತಗಳನ್ನು ಪಡೆದ ಅಭ್ಯರ್ಥಿಯನ್ನು ರದ್ದುಗೊಳಿಸಿ, ಅವರಿಗೆ ಬಿದ್ದ ಮತಗಳಲ್ಲಿರುವ ಎರಡನೇ ಪ್ರಾಶಸ್ತ್ಯದ ಆಯ್ಕೆಯನ್ನು ಇತರೆ ಅಭ್ಯರ್ಥಿಗಳಿಗೆ ಹಂಚಲಾಗುತ್ತದೆ. ಮೇಲ್ನೋಟಕ್ಕೆ ಕಾಂಗ್ರೆಸ್ ಐದನೇ ಅಭ್ಯರ್ಥಿ ಗೆಲುವಿಗೆ ಮತ ಲೆಕ್ಕಾಚಾರ ಪೂರಕವಾಗಿದೆ.

ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಮುಂದೆ ಪ್ರತಿಭಟನೆ

ಕಟ್ಟೋಪನ್‌ಗಳನ್ನು ತೆರವುಗೊಳಿಸುವಂತೆ ಆಗ್ರಹಿಸಲಾಯಿತು.

ವಿದ್ಯುತ್ ಪೂರೈಕೆಯಲ್ಲಿ ಆಗಾಗ್ಗೆ ವ್ಯತ್ಯಯ ಉಂಟಾಗುತ್ತಿರುವ ಹಿನ್ನೆಲೆಯಲ್ಲಿ ರೈತರಿಗೆ ಗುಣಮಟ್ಟದ ಹಾಗೂ ನಿರಂತರ ವಿದ್ಯುತ್ ಪೂರೈಕೆ ಕಲ್ಪಿಸಬೇಕು. ತುಂಗಭದ್ರ ಎಡದಂಡೆ ನಾಲೆಯ ನೀರಿನ ನಿರ್ವಹಣೆಗೆ ಅಗತ್ಯ ಸಿಬ್ಬಂದಿಯನ್ನು ನೇಮಿಸಿ ಮೇಲ್ಭಾಗದಲ್ಲಿ ನಡೆಯುತ್ತಿರುವ ಅನಧಿಕೃತ ನೀರಾವರಿಯನ್ನು ತಡೆಗಟ್ಟಬೇಕು ಎಂದು ಒತ್ತಾಯಿಸಿದರು.

ನಾರಾಯಣಪುರ ಬಲದಂಡೆ ನಾಲೆ ವ್ಯಾಪ್ತಿಯ ಉಪಕಾಲುವೆಗಳ ಸ್ಥಗಿತಗೊಂಡಿರುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಿ ರೈತರಿಗೆ ಸಮರ್ಪಕ ನೀರಾವರಿ ಸೌಲಭ್ಯ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಕಾರ್ಯದರ್ಶಿ ಸೂಗರಯ್ಯ ಆರ್.ಎಸ್. ಮಠ, ರೈತರ ಬೇಡಿಕೆಗಳನ್ನು ಸರ್ಕಾರ ತಕ್ಷಣ ಈಡೇರಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ಉಪಾಧ್ಯಕ್ಷ ದೊಡ್ಡಬಸನಗೌಡ ಬಲ್ಲಟಗಿ, ಜಿಲ್ಲಾಧ್ಯಕ್ಷ ಪ್ರಭಾಕರ ಪಾಟೀಲ್, ಜಿಲ್ಲಾ ಗೌರವಾಧ್ಯಕ್ಷ ಮಲ್ಲಣ್ಣ ದಿನ್ನಿ, ಜಿಲ್ಲಾ ಕಾರ್ಯಾಧ್ಯಕ್ಷ ಬಸವರಾಜ ಮಾಲಿ ಪಾಟೀಲ್, ರಾಜ್ಯ ಕಾರ್ಯದರ್ಶಿ ಯಂಕಪ್ಪ ಕಾರೋಬಾರಿ, ಜಿಲ್ಲಾ ಕಾರ್ಯದರ್ಶಿ ಗೋವಿಂದ ನಾಯಕ, ತಾಲೂಕು ಗೌರವಾಧ್ಯಕ್ಷ ಚಾಮರಸ್ ಜಾನೇಕಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರೆಡ್ಡಿ ಪಾಟೀಲ್, ಜಿಲ್ಲಾ ಉಪಾಧ್ಯಕ್ಷ ಬೂದೆಯ್ಯಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಬ್ರಹ್ಮಯ್ಯ ಚಂದ್ರಬಂಡಾ ಸೇರಿದಂತೆ ರೈತ ಸಂಘದ ಪದಾಧಿಕಾರಿಗಳು ಹಾಗೂ ವಿವಿಧ ಗ್ರಾಮಗಳ ರೈತರು ಭಾಗವಹಿಸಿದ್ದರು.

ಪ್ರಸಾದ್ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡಲು ಒತ್ತಾಯ

ಉತ್ತರ ಕರ್ನಾಟಕದ ಜನರ ಆಶಯಗಳಿಗೆ ಸ್ಪಂದಿಸುವ ದೃಷ್ಟಿಯಿಂದ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಕಳೆದ 32 ವರ್ಷಗಳಿಂದ ಬೆಳಗಾವಿ ವಿಭಾಗದ ಬಲಗೈ ಸಮುದಾಯಕ್ಕೆ ಸಚಿವ ಸ್ಥಾನ ದೊರೆತಿಲ್ಲ ಎಂದು ಹೇಳಿದ ಅವರು, ರಾಜ್ಯ ನಾಯಕತ್ವ ಹಾಗೂ ಕಾಂಗ್ರೆಸ್ ಹೈಕಮಾಂಡ್ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಮುಂದಿನ ಸಚಿವ ಸಂಪುಟ ವಿಸ್ತರಣೆಯಲ್ಲಿ ಪ್ರಸಾದ್ ಅಬ್ಬಯ್ಯ ಅವರಿಗೆ ಅವಕಾಶ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಗೌರವ ಅಧ್ಯಕ್ಷ ಎನ್. ಸತ್ಯನಾರಾಯಣ, ಪ್ರಧಾನ ಕಾರ್ಯದರ್ಶಿ ಎಂ. ಮಾರಪ್ಪ, ಕಾರ್ಯಾಧ್ಯಕ್ಷ ಕೆ ಈ ಕುಮಾರ್ , ಆರ್. ರಾಮಕೃಷ್ಣ, ಆರ್. ಬಸವರಾಜ, ಅಂಜಿನಯ್ಯ ಕೊಂಬಿನ್ , ಕಾರ್ಯಕಾರಿ ಸಮಿತಿ ಸದಸ್ಯ ಪ್ರಾಣೇಶ್ ಮಂಚಲ್ , ಜಂಟಿ ಕಾರ್ಯದರ್ಶಿ ಶಶಿಧರ, ಕಾರ್ಯಕಾರಿ ಸಮಿತಿ ಸದಸ್ಯ ಮಹೇಶ್ ಸಮಾಜ ಮುಖಂಡರಾದ ಈರಣ್ಣ ಕುರ್ಡಿ) ಹಾಗೂ ವೆಂಕಟೇಶ ಅಸ್ಕಿಹಾಳ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಎಸ್ಐಆರ್ ವಿರೋಧಿ ಜನಜಾಗೃತಿ ಜಾಥಾ, ಬೈಕ್ ರ್ಯಾಲಿ

ಎಲ್ಲಾ ಕಸರತ್ತು ನಡೆಸುತ್ತಿದ್ದು, ಇದನ್ನು ಯಶಸ್ವಿಯಾಗಲು ನಾವು ಬಿಡುವುದಿಲ್ಲ. ಸಂವಿಧಾನದ ಮೂಲಕ ನೀಡಿದ ಹಕ್ಕು ಕಸಿದುಕೊಳ್ಳುವ ಹಕ್ಕು ಯಾರಿಗೂ ಇಲ್ಲ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ರಾಜ್ಯಾದ್ಯಂತ ಜಾಥಾದ ಮೂಲಕ ಸಂಚರಿಸುತ್ತಿದ್ದೇವೆ. ಎಲ್ಲರೂ ಜಾಗೃತರಾಗಿ ಒಗ್ಗಟ್ಟಿನ ಹೋರಾಟ ಮಾಡಿದಾಗ ಮಾತ್ರ ಅವರ ಕುತಂತ್ರ ವಿಫಲಗೊಳಿಸಬಹುದು ಎಂದು ಹೇಳಿದರು. ಎದ್ದೇಳು ಕರ್ನಾಟಕದ ಜಿಲ್ಲಾಧ್ಯಕ್ಷ ಶರಣಕುಮಾರ ಎಂ, ಮಾರೆಪ್ಪ ಹರವಿ, ಕಾಂಗ್ರೆಸ್ ಮುಖಂಡ ಮಹಮ್ಮದ್ ಶಾಲಂ, ಶ್ರೀನಿವಾಸ ರೆಡ್ಡಿ, ಫೈಸಲ್ ಖಾನ್, ಆಂಜನೇಯ ಕುರುಬದೊಡ್ಡಿ, ಜಮಾತೆ ಇಸ್ಲಾಂ ಜಿಲ್ಲಾಧ್ಯಕ್ಷ ಅಸಿಮುದ್ದೀನ್ ಅಖ್ತರ್, ಸಮದ್ ಪಾಶ, ಎಸ್ ಮಾರೆಪ್ಪ, ಮತ್ತಿತರರು ಇದ್ದರು.

ಕೆಪಿಆರ್‌ಎಸ್‌ನಿಂದ ವಿವಿಧ ಬೇಡಿಕೆಗೆ ಆಗ್ರಹಿಸಿ ಪ್ರತಿಭಟನೆ

ಕೈಗೊಳ್ಳಬೇಕು.

ಅದೇ ರೀತಿ, ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಿವೇಶನ ರಹಿತ ಬಡ ಕುಟುಂಬಗಳ ಸಂಖ್ಯೆ ದಿನೇದಿನೇ ಹೆಚ್ಚುತ್ತಿದ್ದು, ಅನೇಕ ಕುಟುಂಬಗಳು ಒಂದೇ ಮನೆಯಲ್ಲಿ ಸಂಕಷ್ಟದ ಜೀವನ ನಡೆಸುತ್ತಿವೆ. ಇನ್ನೂ ಹಲವಾರು ಕುಟುಂಬಗಳು ಸರ್ಕಾರಿ ಜಾಗಗಳು ಹಾಗೂ ಆಶ್ರಯ ಕಾಲೋನಿಗಳಲ್ಲಿ ಹಲವು ವರ್ಷಗಳಿಂದ ತಾತ್ಕಾಲಿಕ ಶೆಡ್‌ಗಳನ್ನು ನಿರ್ಮಿಸಿಕೊಂಡು ವಾಸಿಸುತ್ತಿದ್ದರೂ ಇದುವರೆಗೆ ಹಕ್ಕುಪತ್ರಗಳನ್ನು ಪಡೆದಿಲ್ಲ. ಇಂತಹ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ನೀಡುವುದರ ಜೊತೆಗೆ ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಈ ಹಿನ್ನೆಲೆಯಲ್ಲಿ ಕೆಳಕಂಡ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ ಜಿಲ್ಲಾ ಸಮಿತಿ ವತಿಯಿಂದ ★ದಿನಾಂಕ 16-06-2026 ರಂದು ಜಿಲ್ಲಾ ಆಡಳಿತ ಭವನದ ಮುಂಭಾಗದಲ್ಲಿ ಬೃಹತ್ ಧರಣಿ ಸತ್ಯಾಗ್ರಹ★ ಹಮ್ಮಿಕೊಳ್ಳಲಾಗುತ್ತಿದೆ ಎಂದು ಈ ಮೂಲಕ ತಿಳಿಸುತ್ತೇವೆ.

ಬ್ಯಾಂಕ್ ಆಫ್ ಬರೋಡ ರಸ್ತೆಯ ಮಧ್ಯೆ ಜಾಲಿಗಿಡದ ಹಾವಳಿ - ತೆರವಿಗೆ ಹನುಮಂತ ನಾಯಕ ಆಗ್ರಹ

ಅಡಚಣೆಯಾಗುತ್ತಿದೆ. ಎದುರು ಬರುವ ವಾಹನಗಳು ಸ್ಪಷ್ಟವಾಗಿ ಕಾಣದೇ ಅಪಘಾತದ ಆತಂಕ ಹೆಚ್ಚಾಗಿದೆ. ವಿಶೇಷವಾಗಿ ರಾತ್ರಿ ವೇಳೆ ಮತ್ತು ಮಳೆಗಾಲದಲ್ಲಿ ಈ ಸಮಸ್ಯೆ ಗಂಭೀರ ರೂಪ ಪಡೆ ಯುತ್ತಿದೆ ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ತಾಲ್ಲೂಕುಹನುಮಂತ ನಾಯಕ ಆರೋಪಿಸಿದ್ದಾರೆ.

ಈ ರಸ್ತೆಯನ್ನು ಪ್ರತಿದಿನ ಬ್ಯಾಂಕ್ ಗ್ರಾಹಕರು, ರಕ್ತ ಭಂಡಾರ ಕೇಂದ್ರಕ್ಕೆ ಬರುವ ರೋಗಿಗಳು, ವಿದ್ಯಾರ್ಥಿಗಳು ಮತ್ತು ಸಾರ್ವಜ ನಿಕರು ಬಳಸುತ್ತಾರೆ. ಗಿಡಗಳ ಕಾರಣದಿಂದ ಪಾದಚಾರಿಗಳಿಗೆ ರಸ್ತೆಯ ಬದಿಯಲ್ಲಿ ಸುರಕ್ಷಿತವಾಗಿ ನಡೆಯಲು ಜಾಗವೇ ಇಲ್ಲದಂತಾ ಗಿದೆ. ಬ್ಯಾಂಕ್‌ಗೆ ಬರುವ ಹಿರಿಯ ನಾಗರಿಕರು, ಗರ್ಭಿಣಿಯರು ತೊಂ ದರೆ ಅನುಭವಿಸುತ್ತಿದ್ದಾರೆ.

ಅಧಿಕಾರಿಗಳಿಗೆ ಒತ್ತಾಯ:- ಕೂಡಲೇ ಪುರಸಭೆ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ರಸ್ತೆ ಮಧ್ಯೆ ಬೆಳೆದಿರುವ ಜಾಲಿಗಿಡಗಳನ್ನು ತೆರವುಗೊಳಿಸಬೇಕು. ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ತಾಲ್ಲೂಕು ಅಧ್ಯಕ್ಷ ಹನುಮಂತ ನಾಯಕ ಮನವಿ ಮಾಡಿದ್ದಾರೆ.

ಬೈಕ್ ಕಳ್ಳರ ಬಂಧನ

ರಮೇಶ್,ಮಂಜುನಾಥ,ಗೋಪಾಲ,ಪ್ರಕಾಶ,ರೇವಣಸಿದ್ದಪ್ಪ,ಮೌಲಾಹುಸೇನ್, ರಾಮಣ್ಣ,ರವಿ, ದೇವಪ್ಪ,ದಯಾನಂದ,ಗೋಪಾಲ ಮತ್ತು ಮಲ್ಲನಗೌಡ ಸೇರಿದಂತೆ ಹಲವು ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಭಾಗವಹಿಸಿದ್ದರು. ರಾಯಚೂರು ಜಿಲ್ಲೆಯ ಸಿಂಧನೂರು ಉಪವಿಭಾಗದ ಇತಿಹಾಸದಲ್ಲೇ ಒಂದೇ ಕಾರ್ಯಾಚರಣೆಯಲ್ಲಿ 50 ಬೈಕ್‌ಗಳನ್ನು ಜಪ್ತಿ ಮಾಡಿದ ಘಟನೆ ಇದೇ ಮೊದಲು ಎನ್ನಲಾಗಿದೆ.ಕಳೆದ ವರ್ಷ 27 ಬೈಕ್‌ಗಳನ್ನು ಪತ್ತೆಹಚ್ಚಿ ದಾಖಲೆ ನಿರ್ಮಿಸಿದ್ದ ಪಿಎಸ್‌ಐ ಎರಿಯಪ್ಪ,ಈ ಬಾರಿ 50 ಬೈಕ್‌ಗಳನ್ನು ವಶಪಡಿಸಿಕೊಳ್ಳುವ ಮೂಲಕ ತಮ್ಮದೇ ದಾಖಲೆಯನ್ನು ಮುರಿದಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ ಅವರು ತಂಡದ ಕಾರ್ಯವನ್ನು ಶ್ಲಾಘಿಸಿದ್ದು,ಸಾರ್ವಜನಿಕರು ತಮ್ಮ ವಾಹನಗಳ ಸುರಕ್ಷತೆ ಬಗ್ಗೆ ಹೆಚ್ಚಿನ ಎಚ್ಚರಿಕೆ ವಹಿಸಬೇಕು ಎಂದು ಮನವಿ ಮಾಡಿದ್ದಾರೆ.

ಶುದ್ಧ. ಸ್ಪಷ್ಟ. ಮಾದರಿಯ ಮತದಾರರ ಪಟ್ಟಿ ತಯಾರಿಸುವುದೆ

ಮತದಾರ ಪಟ್ಟಿಯಲ್ಲಿ ಸೇರಿಸಬೇಕು .ಶುದ್ಧ .ಸ್ಪಷ್ಟ .ಮಾದರಿಯ ಮತದಾರ ಪಟ್ಟಿಯನ್ನು ತಯಾರಿಸುವುದೇ ಎಸ್.ಐ.ಆರ್ ಕಾರ್ಯಕ್ರಮವಾಗಿದೆ. ಎಂದು ರಾಯಚೂರು ತಾಲೂಕಿನ ಉಡಮಾಗಲ ಖಾನಾಪೂರ ಗ್ರಾಮ ಪಂಚಾಯತಿಯಲ್ಲಿ ಮತದಾರ ಅನುಕೂಲತೆಯ ಮಾಹಿತಿ ಹಾಗೂ ಮತದಾರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕಣೆಯ ಕೇಂದ್ರದ ಸ್ಥಾಪನೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮತದಾರರ ಸಾಕ್ಷರತಾ ಕ್ಲಬ್ ನೋಡಲ್ ಅಧಿಕಾರಿ. ಡಾ. ದಂಡಪ್ಪ ಬಿರಾದಾರ ಮಾತನಾಡಿದರು. ಗ್ರಾಮ ಪಂಚಾಯತಿ ಕಾರ್ಯದರ್ಶಿಯಾದ ಶಾಂತಪ್ಪನವರು ಮಾತನಾಡಿ 18 ವರ್ಷ ಮೇಲ್ಪಟ್ಟವರು ನಮ್ಮ ಗ್ರಾಮದ ಮತಗಟ್ಟೆ ಅಧಿಕಾರಿ ಸಂಪರ್ಕ ಮಾಡಿ ಹೆಸರನ್ನು ಸೇರಿಸಬೇಕು ಏನಾದರೂ ತಮಗೆ ಈ ವಿಷಯ ಕುರಿತು ಸಮಸ್ಯೆಗಳಿದ್ದರೆ ನಮ್ಮ ಗ್ರಾಮ ಪಂಚಾಯತಿ ಸಿಬ್ಬಂದಿಯವರ ಸಹಾಯ ಪಡೆದುಕೊಳ್ಳಬೇಕೆಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿಯ ಸಿಬ್ಬಂದಿಗಳಾದ ಬಸವರಾಜ್ ನರಸಿಬಲು ಮಲ್ಲೇಶ ನಾಯಕ್ ಹನುಮಂತಮ್ಮ ಗೀತಾ ಸರೋಜಾ ಹಾಗೂ ರಾಮಯ್ಯನವರ ಉಪಸ್ಥಿತರಿದ್ದರು

ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ: ಮಾಲಗಿತ್ತಿ ಗ್ರಾಮದಲ್ಲಿ ಜಾಗೃತಿ ಕಾರ್ಯಕ್ರಮ



ಕೊಪ್ಪಳ ಜೂ.16

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪೋಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,ಶಾಲಾ ಮತ್ತು ಸಾಕ್ಷರತಾ ಇಲಾಖೆ,ಆರೋಗ್ಯ ಮತ್ತು ಕುಂಟುಬ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಮಾಲಗಿತ್ತಿ ಗ್ರಾಮ ಪಂಚಾಯತ್ ಇವರುಗಳ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ (ಜೂ. 11ರಂದು) ಮಾಲಗಿತ್ತಿ ಗ್ರಾಮದ ಶ್ರೀಶರಣಬಸವೇಶ್ವರ ದೇವಸ್ಥಾನದಲ್ಲಿ ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತಾದ ಜಾಗೃತಿ (ಮಕ್ಕಳ ಮೇಲಿನ ದೌರ್ಜನ್ಯ ತಡೆಗಾಗಿ ಜನಸಂಪರ್ಕ ಸಂವಾದ) ಕಾರ್ಯಕ್ರಮ ನಡೆಯಿತು.

ಕೊಪ್ಪಳ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ(ಅಸಾಂಸ್ಥಿಕ) ಪ್ರಶಾಂತ ರಡ್ಡಿ ಅವರು ಮಾತನಾಡಿ, ಪೋಷಣೆ ಮತ್ತು ರಕ್ಷಣೆ ಅವಶ್ಯವಿರುವ ಯಾರೇ ಮಕ್ಕಳು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ-1098 ಗೆ ಕರೆ ಮಾಡಿ, ಮಾಹಿತಿಯನ್ನು ನೀಡಿದಲ್ಲಿ ಮಗು ಇರುವಲ್ಲಿಯೇ ತಂಡವು ಆಗಮಿಸಿ, ಮಗುವನ್ನು ರಕ್ಷಿಸಿ ಮುಂದಿನ ಪೋಷಣೆ ಮತ್ತು ರಕ್ಷಣೆಗಾಗಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಮುಂದೆ ಹಾಜರಪಡಿಸಲಾಗುವುದು ಅಥವಾ ನೀವುಗಳೇ ಖುದ್ದು ಮಗುವನ್ನು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರಪಡಿಸಬಹುದಾಗಿದೆ.

ಬೇಡವಾದ ಮಗುವನ್ನು ಕಸದ ತೊಟ್ಟಿ ಮೋರಿ, ದೇವಸ್ಥಾನ, ರಸ್ತೆಬದಿಗಳಲ್ಲಿ ಬಿಸಾಡುವುದು ಕಾನೂನು ಬಾಹಿರ, ಅಮಾನವೀಯ ಮತ್ತು ಅಪಾಯಕಾರಿ ಕೃತ್ಯವಾಗಿದೆ. ಈ ರೀತಿಯಲ್ಲಿ ತೊರೆದು ಹೋದ ಮಗುವು ಇರುವೆ, ನಾಯಿಗಳ ದಾಳಿಗೆ ತುತ್ತಾಗಿ ಪ್ರಾಣ ಕಳೆದು ಕೊಳ್ಳಬಹುದಾಗಿರುತ್ತದೆ. ಆದ್ದರಿಂದ ಬೇಡದ ಮಗುವನ್ನು ಎಲ್ಲೆಂದರಲ್ಲಿ ಬಿಸಾಡದೇ, ಮಗುವನ್ನು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಒಪ್ಪಿಸಬಹುದು. ಸಮಿತಿಯು ಮುಂದಿನ ಪುನರವಸತಿಗಾಗಿ ಮಗುವನ್ನು ಕಾನೂನುಬದ್ದವಾಗಿ ದತ್ತು ನೀಡುವ ಮೂಲಕ ಮಗುವಿಗೆ ಸುಭದ್ರ ಬದುಕನ್ನು ಕಟ್ಟಿಕೊ ಡುತ್ತದೆ. ಸರ್ಕಾರ, ಸಮಿತಿಯ ವಶಕ್ಕೆ ಮಗುವನ್ನು ಒಪ್ಪಿಸಿದ ಪೋಷಕರ ವಿವರಗಳನ್ನು ಬಹಿರಂಗಪಡಿಸಿಸುವುದಿಲ್ಲ. ಗೌಪ್ಯ ತೆಯನ್ನು ಕಾಪಾಡಲಾಗುವುದು ಎಂದು ಮಾಹಿತಿ ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಪ್ರತಿಭಾ ಕಾಶಿಮಠ ಅವರು ಮಾತನಾಡಿ, ಮಕ್ಕಳ ಮೇಲಿನ ಲೈಂಗಿಕ ಅಪರಾಧಗಳನ್ನು ತಡೆಗಟ್ಟಲು ಸರಕಾರವು ವಿವಿಧ ಕಾನೂನುಗಳನ್ನು ಜಾರಿಯಲ್ಲಿ ತಂದಿರುತ್ತದೆ. ಅವುಗಳಲ್ಲಿ ಲೈಂಗಿಕ ಅಪರಾಧಗಳಿಂದ ಮಕ್ಕಳ ಸಂರಕ್ಷಣಾ ಕಾಯ್ದೆ-2012 ತಿದ್ದುಪಡಿ-2019 ಪ್ರಮುಖವಾದದ್ದು, ಈ ಕಾಯ್ದೆಯನ್ವಯ 18 ವರ್ಷದೊಳಗಿನ ಮಕ್ಕಳ ಮೇಲಿನ ಬೇಧಕ ಲೈಂಗಿಕ ಹಲ್ಲೆಗೆ ಕನಿಷ್ಠ 20 ವರ್ಷಗಳಿಂದ ಅಜೀವ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಲೈಂಗಿಕ ಕಿರುಕುಳ ಅಂದರೆಮಕ್ಕಳಿಗೆ ಶಾಬ್ದಿಕ, ಅಂಗಿಕ, ಭಾಷಿಕ ಹಾಗೂ ಲಿಖಿತವಾಗಿ ಅವರ ಘನತೆಗೆ ಧಕ್ಕೆ ಉಂಟುಮಾಡಬಹುದಾದ ಯಾವುದೇ ಈ ರೀತಿಯ ಕೃತ್ಯಗಳಿಗೆ 7 ವರ್ಷಗಳವರೆಗೆ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಬಹುದಾಗಿದೆ. ಈ ರೀತಿಯ ಕೃತ್ಯಗಳಿಗೆ ಸಹಾಯ, ಪ್ರೋತ್ಸಾ ಹ ಮತ್ತು ಪ್ರಯತ್ನಪಟ್ಟವರಿಗೂ ಅಷ್ಟೇ ಪ್ರಮಾಣದ ಶಿಕ್ಷೆಯನ್ನು ವಿಧಿಸಬಹುದಾಗಿದೆ ಎಂದರು.

ಸಾಮಾಜಿಕ ಜಾಲಾತಾಣಗಳಂತಗ ಪ್ರಭಾವದಿಂದ ಪ್ರೀತಿ, ಪ್ರೇಮದ ಹೆಸರಿನಲ್ಲಿ ಮಕ್ಕಳು ತಿಳಿದೊ, ತಿಳಿಯದೆಯೋ ಈ ಕಾಯ್ದೆಯಲ್ಲಿ ಸಿಲುಕುತ್ತಿದ್ದಾರೆ ಅಲ್ಲದೇ ಅಪ್ರಾಪ್ತ ವಯಸ್ಸಿ ನ ಮಕ್ಕಳಿಗೆ ಮದುವೆಯನ್ನು ಮಾಡಿದಂತವರು, ಭಾಗಿಯಾದವರು, ಪ್ರೋತ್ಸಾ ಹಿಸಿದವರು ಬಾಲ್ಯವಿವಾಹ ನಿಷೇಧ ಕಾಯ್ದೆ ಮತ್ತು ಈ ಕಾಯ್ದೆಯಲ್ಲಿ ಸಿಲುಕಿ ಜೈಲು ಶಿಕ್ಷೆಯನ್ನು ಅನುಭವಿಸುತ್ತಿದ್ದಾರೆ. ಆದ್ದರಿಂದ ಗ್ರಾಮ ಮಟ್ಟದಲ್ಲಿ ವಿವಿಧ ರೀತಿಯಲ್ಲಿ ಜಾಗೃತಿಯನ್ನು ಮೂಡಿಸಲು ಗ್ರಾಮ ಮಟ್ಟದ ಮಕ್ಕಳ ರಕ್ಷಣಾ ಸಮಿತಿಯಲ್ಲಿ ಚರ್ಚಿಸಿ, ಮಕ್ಕಳ ಹಕ್ಕುಗಳು, ಕಾನೂನುಗಳ ಮತ್ತು ಮಕ್ಕಳ ಸುರಕ್ಷತೆ ಕುರಿತು ಸಮುದಾಯಗಳಲ್ಲಿ ಜಾಗೃತಿಯನ್ನು ಮೂಡಿಸಿ, ತನ್ಮೂಲಕ ಮಕ್ಕಳ ಮೇಲಿನ ಲೈಂಗಿಕ ಹಲ್ಲೆ, ಬಾಲ್ಯವಿವಾಹಗಳನ್ನು ತಡೆದು ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸುವುದು ಹಾಗೂ ತಾಯಿ ಮರಣ, ಶಿಶು ಮರಣ, ಅಪೌಷ್ಠಿಕ ಮಕ್ಕಳ ಜನನ ನಿರ್ಮೂಲನೆಗಾಗಿ ಸರಕಾರವು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಜಾರಿಗೊಳಿಸಿದೆ. ಅದರನ್ವಯ 18 ವರ್ಷದೊಳಗಿನ ಹೆಣ್ಣು ಮಗುವಿಗೆ ಮತ್ತು 21 ವರ್ಷದೊಳಗಿನ ಗಂಡು ಮಗುವಿಗೆ ವಿವಾಹವನ್ನು ಮಾಡುವುದನ್ನು ನಿಷೇಧಿಸಿದೆ. ರಾಜ್ಯವನ್ನು ಬಾಲ್ಯವಿವಾಹ ಮುಕ್ತ ರಾಜ್ಯವನ್ನಾಗಿಸಲು ಕರ್ನಾಟಕ ರಾಜ್ಯ ಸರಕಾರವು ಕರ್ನಾಟಕ ತಿದ್ದುಪಡಿಯನ್ನು ತಂದಿದ್ದು ಅದರನ್ವಯ ರಾಜ್ಯದಲ್ಲಿ ಬಾಲ್ಯವಿವಾಹಗಳು ಅಸಿಂಧು ವಿವಾಹಗಳಾಗಿವೆ. ಬಾಲ್ಯವಿವಾಹವನ್ನು ಮಾಡುವವರು, ಭಾಗವಹಿಸುವವರು, ಆಯೋಜಿಸುವವರು ಎಲ್ಲರಿಗೂ ಕನಿಷ್ಠ 1 ವರ್ಷದಿಂದ 2 ವರ್ಷಗಳವರೆಗೆ ಜೈಲು ಶಿಕ್ಷೆಯನ್ನು ವಿಧಿಸಬಹುದಾಗಿದೆ. ಆದ್ದರಿಂದ ಬಾಲ್ಯವಿವಾಹಗಳನ್ನು ಮಾಡಬೇಡಿ, ಬಾಲ್ಯವಿವಾಹ ಮುಕ್ತ ಜಿಲ್ಲೆಯನ್ನಾಗಿಸಲು ಸಹಕರಿಸಿ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಲಗಿತ್ತಿ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಪ್ರಶಾಂತ್ ಡಿ. ಹಿರೇಮಠ್ ಅವರು ವಹಿಸಿದ್ದರು. ಸರ್ಕಾರಿ ಪ್ರೌಢಶಾಲೆಯ ಸಹಶಿಕ್ಷಕರಾದ ದೊಡ್ಡನಗೌಡ, ಹನುಮಂತ್ ಲಮಾಣಿ, ಹನುಮಸಾಗರ ಪೊಲೀಸ್ ಠಾಣೆಯ ಎಎಸ್‌ಐ ಶಂಕರ್ ಮೇಟಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಮುತ್ತಣ್ಣನವರು ನಿರೂಪಿಸಿದರು, ದೇವರಾಜ್ ತಿಲಗಾರ್ ಅವರು ವಂದಿಸಿದರು.

ರೈತರು ತಮ್ಮ ಜಮೀನಿನ ಮಣ್ಣಿನಲ್ಲಿ ಸಮತೋಲನ ಗೊಬ್ಬರ ಬಳಸಿ



ಬೀದರ್, ಜೂ.16

ಸಮತೋಲನ ಗೊಬ್ಬರಗಳ ಬಳಕೆಯ ಪ್ರಾಮುಖ್ಯತೆಯ ಮುಖ್ಯವಾಗಿ ರಾಸಾಯನಿಕ ದ್ರವರೂ ಪದ ಗೊಬ್ಬರಗಳಾದ ನ್ಯಾನೋಯುರಿಯಾ ಮತ್ತು ನ್ಯಾನೊಡಿ.ಎ.ಪಿ ಗೊಬ್ಬರಗಳ ಮಾಹಿತಿ ರೈತರು ಅನುಸರಿಸಬೇಕು ಎಂದು ಬೀದರ ಕೃಷಿ ಇಲಾಖೆ ಕೃಷಿ ಅಧಿಕಾರಿ ಸೌಮ್ಯ ಅವರು ತಿಳಿಸಿದ್ದಾರೆ.

ಬೀದರ ಜಿಲ್ಲೆಯ ಬೀದರ ತಾಲ್ಲೂಕಿನ ಕಮಠಾಣ ಗ್ರಾಮ ಪಂಚಾಯತದಲ್ಲಿ ಇತ್ತೀಚಿನ ಖೆತ ಬಚಾವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದ.

ಅತಿ ಮುಖ್ಯವಾಗಿ ಮಣ್ಣು ರೈತನ ಕಣ್ಣು ಎಂಬ ಗಾದೆ ಹಾಗೆ ರೈತರು ತಮ್ಮ ಜಮೀನಿನ ಮಣ್ಣಿನಲ್ಲಿ ಸಮತೋಲನ ಗೊಬ್ಬರಗಳನ್ನು ಬಳಸಿ ಹಾಗೂ ಹೆಚ್ಚಿನ ಪ್ರಮಾಣದಲ್ಲಿ ಜೈವಿಕಗೊಬ್ಬರ ಬಳಸಬೇಕು, ಮತ್ತು ಆಗಾಗ ಮಣ್ಣು ಪರಿಕ್ಷೆ ಮಾಡಿಸಿ ಸಮತೋಲನ ಗೊಬ್ಬರ ಬಳಸಿ ಹೆಚ್ಚಿನ ಇಳುವರಿ ತೆಗೆಯಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ತೊಟಗಾರಿಕೆ ಅಧಿಕಾರಿ ಆನಂದ, ಮತ್ತು ಪ್ರಗತಿ ಪರ ರೈತರು, ಸಹಾಯಕ ತಾಂತ್ರಿಕ ವ್ಯವಸ್ಥಾಪಕ ಗಂಗಾಮ್ಮ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಖೇತ್ ಬಚಾವ್ ಸಮತೋಲನ ಗೊಬ್ಬರ ಬಳಕೆ ರೈತರಿಗೆ ಸಲಹೆ



ಬೀದರ್, ಜೂ.15-

ಸಮತೋಲನ ಗೊಬ್ಬರ, ನ್ಯಾನೊ ಯುರಿಯಾ ನ್ಯನೊ ಡಿಎಪಿ ಬಳಕೆ ರೈತರು ಅನುಸರಿಸಬೇಕು ಎಂದು ಕೃಷಿ ಅಧಿಕಾರಿ ಸೌಮ್ಯ ಅವರು ಹೇಳಿದರು.

ಬಗದಲ್ ಗ್ರಾಮ ಪಂಚಾಯತಿಯಲ್ಲಿ ಇತ್ತೀಚಿನ ಖೇತ ಬಚಾವ ಅಭಿಯಾನದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ,

ನ್ಯಾನೊ ಯುರಿಯಾ ನ್ಯನೊ ಡಿಎಪಿ ಬಳಕೆ ರೈತರಿಗೆ ಮಣ್ಣು ಆರೋಗ್ಯ ಸಮತೋಲನ ಗೊಬ್ಬರ ಅನುಸರಿಸಬೇಕು, ಸಾವಯವ ಮತ್ತು ನೈಸರ್ಗಿಕ ಕೃಷಿಯ ಬಗ್ಗೆ ಸವಿಸ್ತಾರವಾಗಿ ರೈತರಿಗೆ ಮಾಹಿತಿ ನೀಡಲಾಯಿತು ಎಂದರು.

ಈ ಸಂದರ್ಭದಲ್ಲಿ ತೋಟಗಾರಿಕೆ ಅಧಿಕಾರಿ ಶಿವಾನಂದ, ತಾಲೂಕ ತಾಂತ್ರಿಕ ವ್ಯವಸ್ಥಾಪಕರು ಸತೀಶ ಶೆಟಕರ್, ಸಹಾಯಕ ತಾಂತ್ರಿಕ ವ್ಯವಸ್ಥಾಪಕರು ನವನಾಥ ರಾಠೋಡ, ಶ್ರೀಮತಿ ಅಂಬುಜಾ, ಪ್ರಗತಿಪರ ರೈತರು ಉಪಸ್ಥಿತರಿದ್ದರು.

ಬೂತ್ ಮಟ್ಟದ ಏಜೆಂಟರಗಳಿಗೆ ಎಸ್.ಐ.ಆರ್-2026ರ ಮಾಹಿತಿ ಕಾರ್ಯಾಗಾರ

ಮತದಾರರಿಗೆ ಎನುಮರೇಷನ್ ಫಾರಂ ಸಿಗುವಂತೆ ನೋಡಿಕೊಳ್ಳಿ: ಡಾ. ಸುರೇಶ ಇಟ್ನಾಳ



ಕೊಪ್ಪಳ ಜೂ.16

ಎಸ್.ಐ.ಆರ್ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಬಿ.ಎಲ್.ಓ.ಗಳು ಮನೆ ಮನೆಗೆ ಭೇಟಿ ನೀಡಲಿದ್ದು, ಈ ವೇಳೆ ಪ್ರತಿಯೊಬ್ಬ ಅರ್ಹ ಮತದಾರರಿಗೆ ಎನುಮರೇಷನ್ ಫಾರಂ ಸಿಗುವಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸೋಮವಾರ (ಜೂ. 15ರಂದು) ಬೂತ್ ಮಟ್ಟದ ಏಜೆಂಟರುಗಳಿಗೆ (ಬಿ.ಎಲ್.ಎ) ವಿಶೇಷ ಸಮಗ್ರ ಪರಿಷ್ಕರಣೆ ಎಸ್.ಐ.ಆರ್-2026ರ ಮಾಹಿತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಭಾರತದಲ್ಲಿ ಇದುವರೆಗೂ ಒಟ್ಟು 7 ಬಾರಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್.ಐ.ಆರ್) ಆಗಿದೆ. ಕಳೆದ ಬಾರಿ ಕರ್ನಾಟಕದಲ್ಲಿ 2002 ರಲ್ಲಿ ಎಸ್.ಐ.ಆರ್ ಆಗಿತ್ತು. 2002ರ ಮಾತದಾರರ ಪಟ್ಟಿಯಲ್ಲಿರುವವರನ್ನು ಅರ್ಹ ಮತದಾರರೆಂದು ಪರಿಗಣಿಸಲಾಗುತ್ತಿದೆ. ಪ್ರಸ್ತುತ 2025ರ ಮಾತದಾರರ ಪಟ್ಟಿಯನ್ನು 2002ರ ಪಟ್ಟಿಯೊಂದಿಗೆ ಹೋಲಿಕೆ ಮಾಡಿ ಅವರನ್ನು ಮ್ಯಾಪಿಂಗ್ ಮಾಡಲಾಗುತ್ತಿದೆ. ಈ ಪ್ರಕ್ರಿಯೆಯಲ್ಲಿ ಬಿ.ಎಲ್.ಎ ಮತ್ತು ಬಿ.ಎಲ್.ಓ.ಗಳ ಪಾತ್ರ ಬಹಳ ಮುಖ್ಯವಾಗಿದೆ ಎಂದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಚುನಾವಣೆಗಳು ಪಾರದರ್ಶಕವಾಗಿ ನಡೆಯಬೇಕು. ಈ ದಿಶೆಯಲ್ಲಿ ಮತದಾರರ ಪಟ್ಟಿ ದೋಷರಹಿತವಾಗಿರಬೇಕು. ಹಾಗಾಗಿ ಎರಡು ಕಡೆ ಹೆಸರಿರುವ ಮತದಾರರನ್ನು ಪತ್ತೆ ಹಚ್ಚಿ ಪರಿಷ್ಕರಿಸಲಾಗುತ್ತದೆ. ಮತದಾರರ ಪಟ್ಟಿಯ ಪರಿಷ್ಕರಣೆಯು ಈ ಬಾರಿ ಸಂಪೂರ್ಣವಾಗಿ ಡಿಜಿಟಲೈಜ್ ಆಗಿ ನಡೆಯುತ್ತಿರುವುದರಿಂದ ಒಬ್ಬ ಮತದಾರನಿಗೆ ಎರಡು ಕಡೆ ಹೆಸರು ಉಳಿಸಿಕೊಳ್ಳುವುದಕ್ಕೆ ಯಾವುದೇ ಅವಕಾಶವಿಲ್ಲ. ಎಸ್.ಐ.ಆರ್ ಪ್ರಕ್ರಿಯೆಯಲ್ಲಿ 2025ರ ಮತದಾರರ ಪಟ್ಟಿಯಲ್ಲಿರುವ ಪ್ರತಿಯೊಬ್ಬರಿಗೂ ಎನುಮರೇಷನ್ ಫಾರಂ ಕೊಡಲಾಗುತ್ತದೆ. ಮತದಾರರು ಭರ್ತಿ ಮಾಡಿ, ಬಿ.ಎಲ್.ಓ.ಗಳಿಗೆ ನೀಡಿದ್ದಲ್ಲಿ ಅದನ್ನು ಅವರು ಆ್ಯಪ್ ಮೂಲಕ ಮುಂದಿನ ಕ್ರಮ ಕೈಗೊಳ್ಳುವರು ಎಂದರು.

ಬಿ.ಎಲ್.ಓ.ಗಳು ಮನೆ ಮನೆಗೆ ಭೇಟಿ ನೀಡಿ, ಎನುಮರೇಷನ್ ಫಾರಂ ನೀಡುವ ಸಂದರ್ಭದಲ್ಲಿ ಎಲ್ಲಾ ಬೂತ್ ಮಟ್ಟದ ಏಜೆಂಟರುಗಳು ಜಾಗೃತರಾಗಿ ಕಾರ್ಯನಿರ್ವಹಿಸಿ, ಯಾವುದೇ ಅರ್ಹ ಮತದಾರರು ಮತದಾರರ ಪಟ್ಟಿಯಿಂದ ಬಿಟ್ಟು ಹೋಗದಂತೆ ನೋಡಿಕೊಳ್ಳಬೇಕು. ಈ ಬಗ್ಗೆ ಬಿ.ಎಲ್.ಓ.ಗಳು ನಿಮ್ಮೊಂದಿಗೆ ಸಭೆ ಮಾಡಲಿದ್ದು,

ಮತದಾರರಿಂದ ಎನುಮರೇಷನ್ ಫಾರಂ ಸಂಗ್ರಹಿಸಿ, ಅದನ್ನು ಬಿ.ಎಲ್.ಓ.ಗಳಿಗೆ ನೀಡಲು ಎಲ್ಲಾ ಬೂತ್ ಮಟ್ಟದ ಏಜೆಂಟರುಗಳಿಗೆ ಅವಕಾಶ ನೀಡಲಾಗಿದೆ. ಈ ವೇಳೆಯ ಮ್ಯಾಪಿಂಗ್ ಆಗದೇ ಇರುವ ಮತದಾರರ ಮ್ಯಾಪಿಂಗ್ ಮಾಡಿಸಲು ಸಹ ನೀವುಗಳು ಸಹರಿಸಬೇಕು ಎಂದು ಹೇಳಿದರು.

ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಮಾತನಾಡಿ, ಎಸ್.ಐ.ಆರ್ ಹಿನ್ನೆಲೆಯಲ್ಲಿ ರಾಜಕೀಯ ಪಕ್ಷಗಳಿಂದ ಈಗಾಗಲೇ ಬಿ.ಎಲ್.ಎ-1 ಮತ್ತು 2ನ್ನು ನೇಮಿಸಿಕೊಂಡಿದ್ದಾರೆ. ಬಿ.ಎಲ್.ಓ.ಗಳ ವಿವರಗಳುಳ್ಳ ಪಟ್ಟಿಯನ್ನು ಬೂತ್ ಮಟ್ಟದ ಏಜೆಂಟರುಗಳಿಗೆ ನೀಡಬೇಕು. ಇದರಿಂದ ಬಾಕಿ ಇರುವ ಮತದಾರರ ಮ್ಯಾಪಿಂಗ್ ಮಾಡಿಸಲು ಬಿ.ಎಲ್.ಎ.ಗಳಿಗೆ ಅನುಕೂಲವಾಗುತ್ತದೆ. ಈ ಕಾರ್ಯಕ್ರಮವನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು ಎಂದರು.

ಸಂಸದರಾದ ಕೆ ರಾಜಶೇಖರ ಬಸವರಾಜ ಹಿಟ್ನಾಳ ಅವರು ಮಾತನಾಡಿ, ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಪ್ರಯುಕ್ತ ನಮ್ಮ ಜಿಲ್ಲೆಯಲ್ಲಿ ಈಗಾಗಲೇ ಶೇ 92 ಕ್ಕಿಂತು ಹೆಚ್ಚಿನ ಪ್ರಮಾಣದಲ್ಲಿ ಮ್ಯಾಪಿಂಗ್ ಮಾಡಿದ್ದು, ರಾಜ್ಯದಲ್ಲಿ ನಮ್ಮ ಜಿಲ್ಲೆ ಮುಂಚೂಣಿಯಲ್ಲಿದೆ. ಎನುಮರೇಷನ್ ಫಾರಂ ಭರ್ತಿ ಮಾಡಿ ಸಲ್ಲಿಸುವುದು ತುಂಬಾ ಅವಶ್ಯಕವಾಗಿ ಎಂದು ಹೇಳಿದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಶೇ. 100 ಎಥೆನಾಲ್ ಇಂಧನ ಬಳಕೆಯಿಂದ ಯಾರಿಗೆ ಲಾಭ?



ಕೇಂದ್ರ ಸಚಿವ ನಿತಿನ್ ಗಡ್ಕರಿ ಪುತ್ರ ನಿಖಿಲ್ ಗಡ್ಕರಿಯವರ ಸಿಯಾನ್ ಆಗ್ರೋ ಇಂಡಸ್ಟ್ರೀಸ್, ಎಥೆನಾಲ್ ಉತ್ಪಾದನಾ ವಲಯವನ್ನು ಪ್ರವೇಶಿಸಿದ್ದು 2024ರಲ್ಲಿ. ಒಂದೇ ವರ್ಷದಲ್ಲಿ 510 ಕೋಟಿ ಆದಾಯ ಗಳಿಸುವ ಕಂಪನಿಯಾಗಿ ಹೊರಹೊಮ್ಮುತ್ತದೆ. ಇಲ್ಲಿ ಸ್ವಜನಪಕ್ಷಪಾತವಿಲ್ಲ, ಅಧಿಕಾರ ದುರುಪಯೋಗವಿಲ್ಲ, ಭ್ರಷ್ಟಾಚಾರ ಕೂಡ ನಡೆದಿಲ್ಲ. ಹಾಗಾದರೆ ಎಥೆನಾಲ್‌ನಿಂದ ಲಾಭ ಯಾರಿಗೆ? ಕಬ್ಬು ಬೆಳೆಗಾರರಿಗಾ, ರೈತರಿಗಾ, ವಾಹನ ಮಾಲೀಕರಿಗಾ?

ಜೂನ್ 12ರಂದು ಶೇ. 100ರಷ್ಟು ಎಥೆನಾಲ್ ಇಂಧನ ಬಳಕೆಯನ್ನು ಕಾನೂನುಬದ್ಧಗೊಳಿಸುವ ಕಡತಕ್ಕೆ ಸಹಿ ಹಾಕಿದ್ದೇನೆ. ಇದರೊಂದಿಗೆ ಭಾರತದಲ್ಲಿ ಪೆಟ್ರೋಲ್-ಡೀಸೆಲ್ ಮೇಲಿನ ಅವಲಂಬನೆ ಕಡಿಮೆ ಮಾಡುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆ ಎಂದು ನಾಗ್ಪುರದಲ್ಲಿ ನಡೆದ ಸಕ್ಕರೆ ಮತ್ತು ಜೈವಿಕ ಇಂಧನ ಸಮಾವೇಶದಲ್ಲಿ ಕೇಂದ್ರ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ಅಷ್ಟೇ ಅಲ್ಲ, ಎಥೆನಾಲ್ ಇಂಧನ ಬಳಕೆಯು ಪೆಟ್ರೋಲ್‌ಗೆ ಪರ್ಯಾಯ ಇಂಧನವಾಗಿ ಹೊರಹೊಮ್ಮಲು ಅನುವು ಮಾಡಿಕೊಡುತ್ತದೆ. ಭಾರತದ ವಾರ್ಷಿಕ ಕಚ್ಚಾ ಇಂಧನ ಆಮದುಗಳಿಂದಾಗುತ್ತಿರುವ 22 ಲಕ್ಷ ಕೋಟಿ ಹೊರೆಯನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಕೇಂದ್ರ ಸರ್ಕಾರದ ಈ ನೀತಿ ನಿರ್ಧಾರದಿಂದ ದೇಶದ ಕೃಷಿ ವಲಯಕ್ಕೆ, ವಿಶೇಷವಾಗಿ ಕಬ್ಬು ಬೆಳೆಗಾರರಿಗೆ ಭಾರಿ ಲಾಭವಾಗಲಿದೆ ಎಂದು ಕೂಡ ಹೇಳಿದ್ದಾರೆ.

ದೇಶದ ಕಚ್ಚಾತೈಲ ಆಮದು ವೆಚ್ಚ ಕಡಿಮೆಯಾಗುತ್ತದೆ, ಕಡಿಮೆ ಬೆಲೆಗೆ ಗ್ರಾಹಕರಿಗೆ ಇಂಧನ ದೊರೆಯುತ್ತದೆ, ರೈತರಿಗೆ ಲಾಭ ತಂದುಕೊಡುತ್ತದೆ, ಮಾಲಿನ್ಯ ಮುಕ್ತವಾಗುತ್ತದೆ- ಇಷ್ಟೆಲ್ಲ ಲಾಭ, ಕೇಂದ್ರ ಸರ್ಕಾರದ ಒಂದು ನೀತಿನಿರ್ಧಾರದಿಂದ. ಹಾಗಾಗಿ ಈ ನಿರ್ಧಾರ ಮೇಲ್ನೋಟಕ್ಕೇ ಕ್ರಾಂತಿಕಾರಕ ಹೆಜ್ಜೆಯಂತೆ ಕಾಣುತ್ತದೆ. ಬಿಜೆಪಿ ಜನಪರವಾಗಿದೆಯಲ್ಲ ಎನಿಸುತ್ತದೆ. ಅಗತ್ಯಕ್ಕಿಂತ ಹೆಚ್ಚು ಪ್ರಚಾರ ಪಡೆಯುತ್ತದೆ.

ಭಾರತದಂತಹ ಅಭಿವೃದ್ಧಿ ಹೊಂದುತ್ತಿರುವ ದೇಶಕ್ಕೆ ನಿಜಕ್ಕೂ ಎಥೆನಾಲ್ ಅವಶ್ಯಕತೆ ಇದೆ. ಆದರೆ, ಕೇಂದ್ರ ಸಚಿವ ನಿತಿನ್ ಗಡ್ಕರಿಯವರ ತತ್ ಕ್ಷಣದ ನಿರ್ಧಾರಕ್ಕೆ ತಕ್ಕಂತೆ ದೇಶದ ಜನ ಬದಲಾಗುವುದು, ವಾಹನಗಳನ್ನು ಬದಲಿಸುವುದು ಕಷ್ಟವಿದೆ. ಏಕೆಂದರೆ, 2021ರ ಬಜೆಟ್‌ನಲ್ಲಿ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಸ್ವಯಂಪ್ರೇರಿತ ವಾಹನ ಸ್ಕ್ರ್ಯಾಪೇಜ್ ನೀತಿಯನ್ನು ಘೋಷಿಸಿದರು. ನಂತರ ಸಚಿವ ಗಡ್ಕರಿಯವರು, 15 ವರ್ಷಕ್ಕಿಂತ ಹಳೆಯ ವಾಹನಗಳನ್ನು ಡಿ-ರಿಜಿಸ್ಟರ್ ಮಾಡಿ ಸ್ಕ್ರ್ಯಾಪ್ ಮಾಡುವ ನಿಯಮ ಜಾರಿಗೆ ತಂದರು.

ಆ ಸಂದರ್ಭದಲ್ಲಿ, ಹಳೆಯ ವಾಹನಗಳ ಮೇಲಿನ ನಿರ್ಬಂಧ ಮತ್ತು ಹೊಸ ವಾಹನಗಳ ಖರೀದಿಗೆ ಈ ನೀತಿ ಉತ್ತೇಜಿಸುತ್ತದೆ; ವಾಹನ ತಯರಿಕಾ ಕಂಪನಿಗಳು ಮತ್ತು ಗಡ್ಕರಿ ನಡುವೆ ಅಕ್ರಮ ಒಪ್ಪಂದವೇರ್ಪಟ್ಟಿರಬಹುದು ಎಂಬ ಗಂಭೀರ ಆರೋಪ ಕೇಳಿಬಂದಿತ್ತು. ಅಷ್ಟೇ ಅಲ್ಲ, ಪಾಶ್ಚಿಮಾತ್ಯ ದೇಶಗಳಂತೆ ಯ್ಯೂಸ್ ಅಂಡ್ ಥ್ರೋ ಸಂಸ್ಕೃತಿ ನಮ್ಮಲ್ಲಿ ಜಾರಿಗೆ ಬರದಿರುವುದು; ಜನರ ಆರ್ಥಿಕ ಸ್ಥಿತಿ ಸುಧಾರಿಸದಿರುವುದು ಚರ್ಚೆಗೆ ಬಂದಿತ್ತು. ಹಾಗಾಗಿ, ಕೇಂದ್ರದ 2021ರ 15 ವರ್ಷ ಹಳೆಯದಾದ ವಾಹನಗಳನ್ನು ಗುಜರಿಗೆ ಹಾಕುವ ನಿಯಮ ಇವತ್ತಿಗೂ, 5 ವರ್ಷಗಳಾದರೂ ಅನುಷ್ಠಾನಕ್ಕೆ ತರಲಾಗಿಲ್ಲ.

ಇದರ ನಂತರ ಗಡ್ಕರಿಯವರ ಕ್ರಾಂತಿಕಾರಕ ಆಲೋಚನೆ ಹೊರಳಿದ್ದು ಎಥೆನಾಲ್ ಕಡೆಗೆ. ಮೊದಲಿಗೆ 2021ರಲ್ಲಿ ಪೆಟ್ರೋಲ್‌ನೊಂದಿಗೆ ಶೇ. 20ರಷ್ಟು ಬಯೋಎಥೆನಾಲ್ ಮಿಶ್ರಣ ಮಾಡುವುದರಿಂದ ವಾಹನಗಳಿಗೂ ತೊಂದರೆಯಿಲ್ಲ, ಆಮದು ವೆಚ್ಚ ಕೂಡ ಉಳಿಯುತ್ತದೆ, ರೈತರಿಗೂ ಲಾಭವಾಗುತ್ತದೆ ಎಂಬ ದಾಳ ಉರುಳಿಸಿದರು. ಆಯ್ದ ನಗರಗಳಲ್ಲಿ ಶೇ. 2, 5, 10 ಭಾಗ ಎಥೆನಾಲ್ ಮಿಶ್ರಣ ಪೆಟ್ರೋಲ್ ಲಭ್ಯವಾಗತೊಡಗಿತು. ಎಥೆನಾಲ್ ಮಿಶ್ರಣ ಮಾಡಿದ ಪೆಟ್ರೋಲ್ ಬಳಸಿದ ವಾಹನಗಳಲ್ಲಿ ರಬ್ಬರ್ ಸೀಲ್ ಹಾನಿಗೊಳಗಾಗುವುದು, ಇಂಧನ ಪೈಪ್ ಕಟ್ಟಿಕೊಳ್ಳುವುದು, ಕಾಲಕ್ರಮೇಣ ಇಂಜಿನ್ ಭಾಗಗಳು ಸವೆಯುವುದು, ತುಕ್ಕು ಹಿಡಿಯುವುದು ಕಾಣಿಸಿಕೊಳ್ಳತೊಡಗಿತು. ಏಕೆಂದರೆ ಎಥೆನಾಲ್ ಮಿಶ್ರಣ ಮಾಡಿದ ಪೆಟ್ರೋಲ್ ಬಳಕೆಗೆ ಸೂಕ್ತವಾಗುವಂತೆ, ದೇಶದ ವಾಹನ ತಯಾರಿಕಾ ಕಂಪನಿಗಳು ವಾಹನಗಳನ್ನು ತಾಂತ್ರಿಕವಾಗಿ ವಿನ್ಯಾಸಗೊಳಿಸಿರಲಿಲ್ಲ, ಇವತ್ತಿಗೂ ಇಲ್ಲ. ಇಷ್ಟಾದರೂ ಜನ, ಯುದ್ಧ ಮತ್ತು ಮೋದಿ ಮರೆಯಲ್ಲಿ ಕಷ್ಟ-ನಷ್ಟವನ್ನೂ ಸಹಿಸಿಕೊಂಡರು.

ಈ ನಡುವೆ, ಕಳೆದ ವಾರ ಕೇಂದ್ರ ಸಚಿವ ಗಡ್ಕರಿ, ಶೇ. 20ಕ್ಕಿಂತ ಮೇಲ್ಪಟ್ಟ ಎಥೆನಾಲ್ ಮಿಶ್ರಿತ ಪೆಟ್ರೋಲ್‌ಗೆ ತೆರಿಗೆ ವಿನಾಯ್ತಿ ಘೋಷಿಸಿದರು. ಅದಾಗಿ ಮೂರೇ ದಿನಕ್ಕೆ ಶೇ. 100 ಎಥೆನಾಲ್ ಇಂಧನ ಬಳಕೆಯನ್ನು ಕಾನೂನುಬದ್ಧಗೊಳಿಸುವ ಮಾತನಾಡಿದ್ದಾರೆ. ಮತ್ತೆ ಎಥೆನಾಲ್ ಇಂಧನವನ್ನು ಭವಿಷ್ಯದ ಪೆಟ್ರೋಲ್ ಎಂದು ವ್ಯಾಖ್ಯಾನಿಸಿದ್ದಾರೆ. ಕಡಿಮೆ ವೆಚ್ಚದ, ಮಾಲಿನ್ಯ ಮುಕ್ತ, ಸಂಪೂರ್ಣ ಸ್ವದೇಶಿ ಇಂಧನ ಎಂದಿದ್ದಾರೆ. ಕೃಷಿಗೆ ಲಾಭದಾಯಕ ಎಂದು ರೈತರ ಮೂಗಿಗೆ ತುಪ್ಪ ಸವರಿದ್ದಾರೆ.

ಎಥೆನಾಲ್ ಅನ್ನು ಮುಖ್ಯವಾಗಿ ಸಕ್ಕರೆ ಅಥವಾ ಪಿಷ್ಟ ಹೊಂದಿರುವ ಕೃಷಿ ಉತ್ಪನ್ನಗಳಿಂದ ಹುದುಗುವಿಕೆ() ಮೂಲಕ ಉತ್ಪಾದಿಸಲಾಗುತ್ತದೆ. ಕಬ್ಬಿನ ಕಾಕಂಬಿ, ಕಬ್ಬಿನ ರಸ, ಜೋಳ, ಗೋಧಿ, ಅಕ್ಕಿಯ ಕಚ್ಚಾ ವಸ್ತುಗಳಲ್ಲಿರುವ ಪಿಷ್ಟವನ್ನು ಮೊದಲು ಸಕ್ಕರೆಯಾಗಿ ಪರಿವರ್ತಿಸಲಾಗುತ್ತದೆ. ಆ ಗ್ಲೂಕೋಸ್‌ಗೆ ಯೀಸ್ಟ್ ಸೇರಿಸಿ ರಾಸಾಯನಿಕ ಕ್ರಿಯೆಯ ಮೂಲಕ ಉತ್ಪಾದಿಸಲಾಗುತ್ತದೆ. ಸದ್ಯಕ್ಕೆ ದೇಶದಲ್ಲಿ ಕಬ್ಬಿನ ಕಾಕಂಬಿ ಬಳಸಿ ಹೆಚ್ಚಿನ ಪ್ರಮಾಣದಲ್ಲಿ ಎಥೆನಾಲ್ ಉತ್ಪಾದಿಸಲಾಗುತ್ತಿದೆ. ಇದನ್ನು ಪೆಟ್ರೋಲ್‌ನೊಂದಿಗೆ ಮಿಶ್ರಣಕ್ಕೆ, ಮದ್ಯ ತಯಾರಿಕೆಗೆ, ಔಷಧ ಮತ್ತು ಸ್ಯಾನಿಟೈಸರ್ ಉತ್ಪಾದನೆಗೆ, ಕೈಗಾರಿಕೆಗಳಲ್ಲಿ ಬಳಸಲು ಉಪಯೋಗಿಸಲಾಗುತ್ತದೆ. ಕಬ್ಬಿನ ಗುಣಮಟ್ಟ ಮತ್ತು ತಂತ್ರಜ್ಞಾನದ ಆಧಾರದ ಮೇಲೆ ಸಾಮಾನ್ಯವಾಗಿ ಒಂದು ಟನ್ ಕಬ್ಬಿನಿಂದ ಸುಮಾರು 65ರಿಂದ 85 ಲೀಟರ್ ಎಥೆನಾಲ್ ಉತ್ಪಾದಿಸಬಹುದಾಗಿದೆ.

ಇಂತಹ ಎಥೆನಾಲ್ ಉತ್ಪಾದಿಸುವ ಕಂಪನಿಗಳು ದೇಶದಲ್ಲಿ ಸಾಕಷ್ಟಿವೆ. 2020ರಿಂದಲೇ ಕೇಂದ್ರ ಸರ್ಕಾರ ಕಬ್ಬು, ಜೋಳ, ಅಕ್ಕಿ, ಗೋಧಿ ಮುಂತಾದ ಕೃಷಿ ತ್ಯಾಜ್ಯಗಳಿಂದ ಎಥೆನಾಲ್ ಉತ್ಪಾದನೆ ಮಾಡುವ ಕಂಪನಿಗಳಿಗೆ ಸಾಲ ಸೌಲಭ್ಯ ಮತ್ತು ಬಡ್ಡಿ ಸಬ್ಸಿಡಿ ನೀಡುತ್ತ ಬಂದಿದೆ. ಸರ್ಕಾರದ ಈ ಅನುಕೂಲ ಪಡೆದ ಕಂಪನಿಗಳಲ್ಲಿ ಪ್ರಮುಖ ಫಲಾನುಭವಿಗಳು ಕೇಂದ್ರ ಸಚಿವ ನಿತಿನ್ ಗಡ್ಕರಿಯವರ ಪುತ್ರರಾದ ಸಾರಂಗ್ ಮತ್ತು ನಿಖಿಲ್ ಗಡ್ಕರಿಯವರ, ಮಾನಸ್ ಹಾಗೂ ಸಿಯಾನ್ ಆಗ್ರೋ ಇಂಡಸ್ಟ್ರೀಸ್. ಈ ಕಂಪನಿಗಳು ಸಕ್ಕರೆ, ಡಿಸ್ಟಿಲರಿ ಮತ್ತು ಎಥೆನಾಲ್ ಕ್ಷೇತ್ರಗಳಲ್ಲಿ ವ್ಯವಹಾರ ನಡೆಸುತ್ತಿವೆ. ಈ ಕಂಪನಿಗಳಿಂದ ಸರ್ಕಾರ ನೇರವಾಗಿ ಎಥೆನಾಲ್ ಖರೀದಿಸುವುದಿಲ್ಲ. ಬದಲಾಗಿ, ಇಂಡಿಯನ್ ಆಯಿಲ್, ಭಾರತ್ ಪೆಟ್ರೋಲಿಯಂ, ಹಿಂದೂಸ್ಥಾನ್ ಪೆಟ್ರೋಲಿಯಂ ಮುಂತಾದ ತೈಲ ಮಾರುಕಟ್ಟೆ ಕಂಪನಿಗಳು ಎಥೆನಾಲ್ ಖರೀದಿಸಿ ಪೆಟ್ರೋಲ್‌ಗೆ ಮಿಶ್ರಣ ಮಾಡುತ್ತವೆ. ಗ್ರಾಹಕರಿಗೆ ಒದಗಿಸುತ್ತವೆ.

ಅಪ್ಪ ನಿತಿನ್ ಗಡ್ಕರಿ ಎಥೆನಾಲ್ ಬಗ್ಗೆ ಒಲವು ಹೊಂದಿ, ಅದನ್ನು ಪೆಟ್ರೋಲ್‌ನೊಂದಿಗೆ ಮಿಶ್ರಣ ಮಾಡಲು ಹಂತ ಹಂತವಾಗಿ ಸರ್ಕಾರಿ ಆದೇಶ ಹೊರಡಿಸುತ್ತಿದ್ದಂತೆ, ಫೆಬ್ರವರಿ 2024ರಲ್ಲಿ ಗಡ್ಕರಿ ಪುತ್ರ ನಿಖಿಲ್ ಗಡ್ಕರಿಯವರ ಸಿಯಾನ್ ಆಗ್ರೋ ಇಂಡಸ್ಟ್ರೀಸ್, ಎಥೆನಾಲ್ ಉತ್ಪಾದನಾ ವಲಯವನ್ನು ಪ್ರವೇಶಿಸುತ್ತದೆ. ಆಗ ಆ ಕಂಪನಿಯ ಷೇರು ಬೆಲೆ ಕೇವಲ 41 ರೂ. ಆ ವರ್ಷ ಅದು ಎಥೆನಾಲ್ ಉತ್ಪಾದನೆಯಿಂದ ಗಳಿಸಿದ ಆದಾಯ 17 ಕೋಟಿ ರೂಪಾಯಿ. ಸಚಿವ ಗಡ್ಕರಿಯವರು ಜುಲೈ 2025ರ ಹೊತ್ತಿಗೆ ಎಥೆನಾಲ್ ಮಿಶ್ರಣವನ್ನು ಶೇ. 19ಕ್ಕೆ ಏರಿಸಿದರು. ಆ ಸಂದರ್ಭದಲ್ಲಿ ನಿಖಿಲ್ ಗಡ್ಕರಿಯವರ ಕಂಪನಿಯ ವಾರ್ಷಿಕ ವಹಿವಾಟು 2,061 ಕೋಟಿಗೆ ಏರಿಕೆಯಾಗುತ್ತದೆ. ಒಂದೇ ವರ್ಷದಲ್ಲಿ 17 ಕೋಟಿಯಿಂದ 510 ಕೋಟಿ ಆದಾಯ ಗಳಿಸುವ ಕಂಪನಿಯಾಗಿ ಹೊರಹೊಮ್ಮುತ್ತದೆ.

ಇಲ್ಲಿ ಸ್ವಜನಪಕ್ಷಪಾತವಿಲ್ಲ, ಅಧಿಕಾರ ದುರುಪಯೋಗವಿಲ್ಲ, ಭ್ರಷ್ಟಾಚಾರ ಕೂಡ ನಡೆದಿಲ್ಲ. ಸಂಘಪರಿವಾರ, ಬಿಜೆಪಿ ಮತ್ತು ದೇಶಭಕ್ತರ ಬಗ್ಗೆ ಇಂತಹ ಆರೋಪ ಮಾಡುವಂತಿಲ್ಲ.

ಹಾಗಾದರೆ ಎಥೆನಾಲ್‌ನಿಂದ ಲಾಭ ಯಾರಿಗೆ? ಕಬ್ಬು ಬೆಳೆಗಾರರಿಗಾ, ರೈತರಿಗಾ, ವಾಹನ ಮಾಲೀಕರಿಗಾ?

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸಚಿವರ ಹೆಜ್ಜೆ ಗುರುತು ಕಾಣದ ಉತ್ತರ ಕನ್ನಡ: ಆಡಳಿತದ ಅಂತರವೇ ಅಭಿವೃದ್ಧಿಗೆ ಅಡ್ಡಿ

ಉತ್ತರ ಕನ್ನಡ ಸಂಪನ್ಮೂಲ ಸಮೃದ್ಧವಾಗಿದ್ದರೂ ಅಭಿವೃದ್ಧಿಯಲ್ಲಿ ಹಿಂದುಳಿದಿರುವುದನ್ನು ಇನ್ನು ಮುಂದೆ ಬದಲಾಯಿಸುವ ಸಮಯ ಬಂದಿದೆ. ಇದಕ್ಕೆ ರಾಜಕೀಯ ಇಚ್ಛಾಶಕ್ತಿ, ದೂರದೃಷ್ಟಿ ಮತ್ತು ಪರಿಣಾಮಕಾರಿ ಕಾರ್ಯತಂತ್ರಗಳ ಅಗತ್ಯವಿದೆ. ಈ ಜಿಲ್ಲೆಯ ಜನತೆಗೆ ಅರ್ಹವಾದ ಅಭಿವೃದ್ಧಿ ಲಭಿಸುವುದು ಇಂದಿನ ಅಗತ್ಯವೂ ಹೌದು, ಭವಿಷ್ಯದ ಭರವಸೆಯೂ ಹೌದು. ಹಾಗಾಗಿ ಜಿಲ್ಲೆಯ ಶಾಸಕರಿಗೆ ಸಚಿವ ಸ್ಥಾನ ನೀಡಿದರೆ ಒಳಿತು ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ವಿಸ್ತೀರ್ಣದಲ್ಲಿ ರಾಜ್ಯದ ಅತಿದೊಡ್ಡ ಜಿಲ್ಲೆಗಳಲ್ಲಿ ಒಂದಾಗಿರುವ ಉತ್ತರ ಕನ್ನಡ, ಪ್ರಕೃತಿ ಸಂಪತ್ತು, ಪ್ರವಾಸೋದ್ಯಮ, ಶಿಕ್ಷಣ, ಮೀನುಗಾರಿಕೆ, ಕೃಷಿ ಹಾಗೂ ಕೈಗಾರಿಕಾ ಸಾಮರ್ಥ್ಯ ಹೊಂದಿದ್ದರೂ ಅಭಿವೃದ್ಧಿಯ ಹಲವು ಮಾನದಂಡಗಳಲ್ಲಿ ಇನ್ನೂ ಹಿಂದುಳಿದ ಜಿಲ್ಲೆಯೆಂಬ ಟೀಕೆಗೆ ಗುರಿಯಾಗಿದೆ. ಜಿಲ್ಲೆಯ ಅಭಿವೃದ್ಧಿಗೆ ಬೇಕಾದ ಮೂಲಸೌಕರ್ಯ, ಆರೋಗ್ಯ ಸೇವೆ, ಉನ್ನತ ಶಿಕ್ಷಣ, ಕೈಗಾರಿಕೆ ಮತ್ತು ಉದ್ಯೋಗ ಸೃಷ್ಟಿ ವಿಷಯಗಳು ವರ್ಷಗಳಿಂದ ಚರ್ಚೆಗೆ ಬರುತ್ತಿದ್ದರೂ, ಅವುಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಪ್ರಯತ್ನಗಳು ನಿರೀಕ್ಷಿತ ಮಟ್ಟದಲ್ಲಿ ನಡೆದಿಲ್ಲ ಎಂಬುದು ಸ್ಥಳೀಯರ ಅಭಿಪ್ರಾಯವಾಗಿದೆ.

ಈ ಚರ್ಚೆಯ ನಡುವೆಯೇ ಮತ್ತೊಂದು ಅಂಶ ಗಮನ ಸೆಳೆದಿದೆ. ಸಚಿವ ಸಂಪುಟದಲ್ಲಿ ಮಹತ್ವದ ಹುದ್ದೆ ಅಲಂಕರಿಸಿದ ಹಲವು ಸಚಿವರು ತಮ್ಮ ಅಧಿಕಾರಾವಧಿಯಲ್ಲಿ ಒಮ್ಮೆಯಾದರೂ ಉತ್ತರ ಕನ್ನಡ ಜಿಲ್ಲೆಗೆ ಭೇಟಿ ನೀಡದೆ ಅವಧಿ ಪೂರ್ಣಗೊಳಿಸಿರುವ ಸಂಗತಿ ಸಾರ್ವಜನಿಕ ವಲಯದಲ್ಲಿ ಪ್ರಶ್ನೆ ಹುಟ್ಟಿಸಿದೆ.

ಜಿಲ್ಲೆಗೆ ಭೇಟಿ ನೀಡದಿರುವುದು ಕೇವಲ ಔಪಚಾರಿಕತೆಯ ಕೊರತೆಯಷ್ಟೇ ಅಲ್ಲ. ಸಚಿವರು ಜಿಲ್ಲೆಗೆ ಭೇಟಿ ನೀಡಿದಾಗ ಇಲಾಖಾ ಮಟ್ಟದ ಸಭೆಗಳು ನಡೆಯುತ್ತವೆ. ಸ್ಥಳೀಯ ಅಧಿಕಾರಿಗಳಿಂದ ನೇರ ಮಾಹಿತಿ ಪಡೆಯಲು ಸಾಧ್ಯವಾಗುತ್ತದೆ. ಜನಪ್ರತಿನಿಧಿಗಳು, ಸಂಘ-ಸಂಸ್ಥೆಗಳು ಮತ್ತು ಸಾರ್ವಜನಿಕರಿಂದ ಸಮಸ್ಯೆಗಳ ಕುರಿತು ಮನವಿ ಸ್ವೀಕರಿಸುವ ಅವಕಾಶ ಸಿಗುತ್ತದೆ. ಸ್ಥಳ ಪರಿಶೀಲನೆಯ ಮೂಲಕ ನೆಲಮಟ್ಟದ ವಾಸ್ತವ ಚಿತ್ರಣ ತಿಳಿಯುತ್ತದೆ. ಈ ಪ್ರಕ್ರಿಯೆಯೇ ನಡೆಯದಿದ್ದಾಗ ಅನೇಕ ಸಮಸ್ಯೆಗಳು ಕಡತಗಳಲ್ಲೇ ಸೀಮಿತವಾಗುವ ಅಪಾಯ ಹೆಚ್ಚಾಗುತ್ತದೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ ಆರೋಗ್ಯ ಕ್ಷೇತ್ರದ ಸಮಸ್ಯೆಗಳು ಹಲವು ವರ್ಷಗಳಿಂದ ಚರ್ಚೆಯಲ್ಲಿವೆ. ಜಿಲ್ಲೆಯ ಜನರಿಗೆ ಸೂಪರ್ ಸ್ಪೆಷಾಲಿಟಿ ಚಿಕಿತ್ಸೆ ಗಾಗಿ ಹುಬ್ಬಳ್ಳಿ, ಮಣಿಪಾಲ,



ಬೆಳಗಾವಿ ಅಥವಾ ಬೆಂಗಳೂರಿನತ್ತ ಮುಖ ಮಾಡಬೇಕಾದ ಪರಿಸ್ಥಿತಿ ಇದೆ. ಸರ್ಕಾರಿ ಆಸ್ಪತ್ರೆಗಳ ಉನ್ನತೀಕರಣ, ತಜ್ಞ ವೈದ್ಯರ ನೇಮಕಾತಿ ಮತ್ತು ಆರೋಗ್ಯ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ನಿರ್ಧಾರಗಳು ವೇಗ ಪಡೆಯಬೇಕಾದರೆ ಸಂಬಂಧಿತ ಸಚಿವರು ಸ್ಥಳಕ್ಕೆ ಭೇಟಿ ನೀಡಿ ವಾಸ್ತವ ಸ್ಥಿತಿ ಅರಿಯುವುದು ಅಗತ್ಯ ಎನ್ನುವ ಅಭಿಪ್ರಾಯ ಕೇಳಿಬರುತ್ತಿದೆ.

ಉನ್ನತ ಶಿಕ್ಷಣ ಕ್ಷೇತ್ರದಲ್ಲಿಯೂ ಇದೇ ಸ್ಥಿತಿ ಇದೆ. ಜಿಲ್ಲೆಯ ಅನೇಕ ವಿದ್ಯಾರ್ಥಿಗಳು ವೃತ್ತಿಪರ ಹಾಗೂ ಉನ್ನತ ಶಿಕ್ಷಣಕ್ಕಾಗಿ ಹೊರ ಜಿಲ್ಲೆಗಳಿಗೆ ತೆರಳಬೇಕಾಗುತ್ತದೆ. ಹೊಸ ಶಿಕ್ಷಣ ಸಂಸ್ಥೆಗಳ ಸ್ಥಾಪನೆ, ಈಗಿರುವ ಕಾಲೇಜುಗಳ ಸೌಲಭ್ಯ ವಿಸ್ತರಣೆ ಹಾಗೂ ಕೌಶಲ್ಯಾಭಿವೃದ್ಧಿ ಕೇಂದ್ರಗಳ ಬಲವರ್ಧನೆ ಕುರಿತು ನಿರಂತರ ಗಮನ ಅಗತ್ಯವಾಗಿದೆ.

ಉದ್ಯೋಗ ಸೃಷ್ಟಿ ವಿಷಯವೂ ಜಿಲ್ಲೆಯ ಪ್ರಮುಖ ಸವಾಲುಗಳಲ್ಲಿ ಒಂದಾಗಿದೆ. ಕೈಗಾರಿಕಾ ಹೂಡಿಕೆಗಳ ಕೊರತೆ, ದೊಡ್ಡ ಪ್ರಮಾಣದ ಕೈಗಾರಿಕೆಗಳ ಅಭಾವ ಮತ್ತು ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳ ಸೀಮಿತತೆ ಜಿಲ್ಲೆಯಿಂದ ವಲಸೆ ಹೆಚ್ಚಾಗಲು ಕಾರಣವಾಗುತ್ತಿದೆ ಎನ್ನಲಾಗುತ್ತಿದೆ. ಕೈಗಾರಿಕಾ ಸಚಿವರು ಹಾಗೂ ಸಂಬಂಧಿತ ಇಲಾಖೆಗಳು ಜಿಲ್ಲೆಗೆ ಭೇಟಿ ನೀಡಿ ಹೂಡಿಕೆ ಸಾಧ್ಯತೆಗಳನ್ನು ಪರಿಶೀಲಿಸಿದರೆ ಹೊಸ ಅವಕಾಶಗಳು ಸೃಷ್ಟಿಯಾಗಬಹುದೆಂಬ ನಿರೀಕ್ಷೆ ವ್ಯಕ್ತವಾಗುತ್ತಿದೆ.

ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ, ಕುಡಿಯುವ ನೀರು, ಸೇತುವೆ, ಶಾಲಾ ಕಟ್ಟಡಗಳು, ಕೃಷಿ ಸಮಸ್ಯೆಗಳು ಹಾಗೂ ಅರಣ್ಯ ಅಂಚಿನ ಭಾಗಗಳ ಜನರ ಬೇಡಿಕೆಗಳು ಇನ್ನೂ ಸಮರ್ಪಕ ಪರಿಹಾರಕ್ಕಾಗಿ ಕಾಯುತ್ತಿವೆ. ಅನೇಕ ಬಾರಿ ಸ್ಥಳೀಯ ಜನಪ್ರತಿನಿಧಿಗಳು ಮನವಿ ಸಲ್ಲಿಸಿದರೂ, ಸಚಿವರ ನೇರ ಮಧ್ಯಪ್ರವೇಶವಿಲ್ಲದೆ ಕೆಲವು ಯೋಜನೆಗಳು ವಿಳಂಬಗೊಳ್ಳುತ್ತವೆ ಎಂಬ ಆರೋಪವೂ ಕೇಳಿಬರುತ್ತಿದೆ.

ಆಡಳಿತ ತಜ್ಞರ ಅಭಿಪ್ರಾಯದ ಪ್ರಕಾರ, ಪ್ರತಿ ಸಚಿವರೂ ತಮ್ಮ ಇಲಾಖೆಗೆ ಸಂಬಂಧಿಸಿದಂತೆ ರಾಜ್ಯದ ಎಲ್ಲ ಜಿಲ್ಲೆಗಳಿಗೆ ಕನಿಷ್ಠ ಒಂದು ಬಾರಿ ಭೇಟಿ ನೀಡುವ ವ್ಯವಸ್ಥೆ ರೂಪಿಸಬೇಕು. ಜಿಲ್ಲಾವಾರು ಪ್ರಗತಿ ಪರಿಶೀಲನಾ ಸಭೆಗಳನ್ನು ಕಡ್ಡಾಯಗೊಳಿಸಿ, ಸ್ಥಳ ಪರಿಶೀಲನೆಗೆ ಆದ್ಯತೆ ನೀಡಿದರೆ ಸಮಸ್ಯೆಗಳ ತ್ವರಿತ ಪರಿಹಾರ ಸಾಧ್ಯವಾಗಬಹುದು.

ಉತ್ತರ ಕನ್ನಡ ಜಿಲ್ಲೆ ರಾಜ್ಯದ ಗಡಿ ಭಾಗದಲ್ಲಿರುವ ಕಾರಣದಿಂದ ವಿಶೇಷ ಆಡಳಿತಾತ್ಮಕ ಗಮನಕ್ಕೆ ಅರ್ಹವಾಗಿದೆ. ಕರಾವಳಿ, ಮಲೆನಾಡು ಹಾಗೂ ಅರಣ್ಯ ಪ್ರದೇಶಗಳನ್ನು ಒಳಗೊಂಡಿರುವ ಈ ಜಿಲ್ಲೆಯಲ್ಲಿ ಸಮಸ್ಯೆಗಳ ಸ್ವರೂಪವೂ ವಿಭಿನ್ನವಾಗಿದೆ. ಆದ್ದರಿಂದ ಬೆಂಗಳೂರಿನಲ್ಲೇ ಸೀಮಿತವಾಗುವ ಆಡಳಿತಕ್ಕಿಂತ ನೆಲಮಟ್ಟದ ಆಡಳಿತ ಹೆಚ್ಚು ಪರಿಣಾಮಕಾರಿ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

ಸಚಿವರು ಜಿಲ್ಲೆಗೆ ಭೇಟಿ ನೀಡುವುದು ಕೇವಲ ಪ್ರೋಟೋಕಾಲ್ ಅಲ್ಲ; ಅದು ಜನರೊಂದಿಗೆ ಸರ್ಕಾರದ ನೇರ ಸಂಪರ್ಕದ ಸಂಕೇತ. ಜನರ ಸಮಸ್ಯೆಗಳನ್ನು ಅವರ ನೆಲದಲ್ಲೇ ಆಲಿಸಿ, ಪರಿಹಾರದ ದಿಕ್ಕಿನಲ್ಲಿ ಕ್ರಮ ಕೈಗೊಳ್ಳುವ ಹೊಣೆಗಾರಿಕೆಯ ಭಾಗವಾಗಿದೆ. ಉತ್ತರ ಕನ್ನಡದಂತಹ ವಿಶಾಲ ಜಿಲ್ಲೆಗಳ ಅಭಿವೃದ್ಧಿಗೆ ಸಚಿವರ ಸಕ್ರಿಯ ಉಪಸ್ಥಿತಿ ಅಗತ್ಯವಾಗಿದ್ದು, ಮುಂದಿನ ದಿನಗಳಲ್ಲಿ ಸರ್ಕಾರ ಈ ನಿಟ್ಟಿನಲ್ಲಿ ಸ್ಪಷ್ಟ ನೀತಿ ರೂಪಿಸಬೇಕೆಂಬ ಆಗ್ರಹ ಜಿಲ್ಲೆಯ ವಿವಿಧ ವಲಯಗಳಿಂದ ಕೇಳಿಬರುತ್ತಿದೆ.

ಅಭಿವೃದ್ಧಿಯ ಅಂತರ ಕಡಿಮೆಯಾಗಬೇಕಾದರೆ ಯೋಜನೆಗಳು ಕಡತಗಳಿಂದ ಹೊರಬಂದು ನೆಲಕ್ಕೆ ಇಳಿಯಬೇಕು. ಅದಕ್ಕಾಗಿ ಜಿಲ್ಲೆಯ ಬಾಗಿಲು ತಟ್ಟುವ ಆಡಳಿತವೇ ಉತ್ತರ ಕನ್ನಡದ ಬಹುಕಾಲದ ನಿರೀಕ್ಷೆಯಾಗಿದೆ.

ಉತ್ತರ ಕನ್ನಡ ಜಿಲ್ಲೆಯನ್ನು ಇನ್ನಾದರೂ ಅಭಿವೃದ್ಧಿಪಡಿಸಬೇಕು. ಸ್ಥಳೀಯರ ಅಭಿಪ್ರಾಯಕ್ಕೆ ಮನ್ನಣೆ ನೀಡಿ, ಜಿಲ್ಲೆಯ ವಿಶೇಷ ಸಾಮರ್ಥ್ಯಗಳನ್ನು ಗುರುತಿಸಿ, ಯೋಜಿತ ಮತ್ತು ಫಲಪ್ರದ ಅಭಿವೃದ್ಧಿ ಯೋಜನೆಗಳನ್ನು ತ್ವರಿತಗತಿಯಲ್ಲಿ ಜಾರಿಗೊಳಿಸುವ ಅಗತ್ಯವಿದೆ. ಸರ್ಕಾರ, ಸ್ಥಳೀಯ ಸಂಸ್ಥೆಗಳು, ಉದ್ಯಮಿಗಳು ಮತ್ತು ಜನಪ್ರತಿನಿಧಿಗಳ ನಡುವಿನ ಸಮನ್ವಯದಿಂದ ಮಾತ್ರ ಉತ್ತರ ಕನ್ನಡವು ಹಿಂದುಳಿದ ಜಿಲ್ಲೆ ಎಂಬ ಟೀಕೆಯಿಂದ ಮುಕ್ತವಾಗಿ, ರಾಜ್ಯದ ಅಭಿವೃದ್ಧಿ ಪಥದಲ್ಲಿ ಮುಂಚೂಣಿಯಲ್ಲಿರುವ ಜಿಲ್ಲೆಯಾಗಿ ಹೊರಹೊಮ್ಮಬಹುದು.

ಉತ್ತರ ಕನ್ನಡ - ಸಂಪನ್ಮೂಲ ಸಮೃದ್ಧವಾಗಿದ್ದರೂ ಅಭಿವೃದ್ಧಿಯಲ್ಲಿ ಹಿಂದುಳಿದಿರುವುದನ್ನು ಇನ್ನು ಮುಂದೆ ಬದಲಾಯಿಸುವ ಸಮಯ ಬಂದಿದೆ. ಇದಕ್ಕೆ ರಾಜಕೀಯ ಇಚ್ಛಾಶಕ್ತಿ, ದೂರದೃಷ್ಟಿ ಮತ್ತು ಪರಿಣಾಮಕಾರಿ ಕಾರ್ಯತಂತ್ರಗಳ ಅಗತ್ಯವಿದೆ. ಈ ಜಿಲ್ಲೆಯ ಜನತೆಗೆ ಅರ್ಹವಾದ ಅಭಿವೃದ್ಧಿ ಲಭಿಸುವುದು ಇಂದಿನ ಅಗತ್ಯವೂ ಹೌದು, ಭವಿಷ್ಯದ ಭರವಸೆಯೂ ಹೌದು. ಹಾಗಾಗಿ ಜಿಲ್ಲೆಯ ಶಾಸಕರಿಗೆ ಸಚಿವ ಸ್ಥಾನ ನೀಡಿದರೆ ಒಳಿತು ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

ಕಾಂಗ್ರೆಸ್ ಮಡಿಲಿಗೆ ಮಮತಾ, ಪವಾರ? ಮಹಾ ವಿಲೀನದ ಹಾದಿಯಲ್ಲಿ ವಿಪಕ್ಷಗಳು!

ಸತತ ಚುನಾವಣಾ ಸೋಲುಗಳು, ಮೋದಿ ಸರ್ಕಾರದ ದಮನ, ಆಂತರಿಕ ಒಡಕುಗಳು ಹಾಗೂ ಕೇಂದ್ರೀಕೃತ ರಾಷ್ಟ್ರೀಯ ರಾಜಕಾರಣದ ಅಬ್ಬರದ ನಡುವೆ ಪ್ರಾದೇಶಿಕ ಪಕ್ಷಗಳು ದುರ್ಬಲವಾಗುತ್ತಿವೆ. ಅವುಗಳ ಶಕ್ತಿ ಕ್ಷೀಣಿಸುತ್ತಿದೆ. ಇದು ಮಹಾ ವಿಲೀನದ ಅನಿವಾರ್ಯತೆಗೆ ಮುಖ್ಯ ಕಾರಣವೂ ಆಗಿದೆ.

2024ರ ಲೋಕಸಭಾ ಚುನಾವಣೆಯು ದೇಶದ ದಿಕ್ಕು ಬದಲಾಯಿಸುತ್ತದೆ. ಆ ದಿಕ್ಕನ್ನು ಬದಲಿಸುವ ಗುರಾಣಿ ಮತದಾರರ ಕೈಯಲ್ಲಿದೆ ಎಂದೇ ಭಾವಿಸಲಾಗಿತ್ತು. ಆದರೆ, ಮತದಾರರು ಪರಿಪೂರ್ಣ ಅಧಿಕಾರ ಕೊಡದಿದ್ದರೂ, ಮೋದಿಗೆ ಮತ್ತೊಮ್ಮೆ ಮಣೆ ಹಾಕಿದರು. ಈಗ, ಅದೇ ಮತದಾರರ ಮತದಾನದ ಹಕ್ಕನ್ನೇ ಮೋದಿ ಸರ್ಕಾರ ಕಸಿದುಕೊಳ್ಳುತ್ತದೆ. ಈ ಚರ್ಚೆಯನ್ನು ಬದಿಗಿಟ್ಟು ನೋಡಿದರೆ, ಆ ಚುನಾವಣೆಯ ಸಮಯದಲ್ಲಿ, ಭಾರತೀಯ ರಾಜಕಾರಣದ ಅತ್ಯಂತ ಹಿರಿಯ ನಾಯಕ ಶರದ್ ಪವಾರ್ ಅವರು ಆಡಿದ್ದ ಒಂದು ಮಾತು ದೇಶದ ರಾಜಕೀಯ ವಲಯದಲ್ಲಿ ಭಾರಿ ಸಂಚಲನ ಮೂಡಿಸಿತ್ತು. ''ಮುಂದಿನ ದಿನಗಳಲ್ಲಿ ದೇಶದ ಹಲವು ಸಣ್ಣ ಮತ್ತು ಪ್ರಾದೇಶಿಕ ಪಕ್ಷಗಳು ಅಸ್ತಿತ್ವ ಉಳಿಸಿಕೊಳ್ಳಲು ಕಾಂಗ್ರೆಸ್ ಪಕ್ಷದೊಂದಿಗೆ ವಿಲೀನವಾಗಲಿವೆ ಅಥವಾ ಅತ್ಯಂತ ನಿಕಟವಾಗಿ ಒಟ್ಟಿಗೆ ಕೆಲಸ ಮಾಡಲಿವೆ'' ಎಂದು ಪವಾರ್ ಭವಿಷ್ಯ ನುಡಿದಿದ್ದರು.

ಅಂದು ಅನೇಕ ರಾಜಕೀಯ ವಿಶ್ಲೇಷಕರು ಪವಾರ್ ಅವರ ಮಾತನ್ನು ಕೇವಲ ಚುನಾವಣಾ ಕಾಲದ ತಂತ್ರಗಾರಿಕೆ ಅಥವಾ ರಾಜಕೀಯ ಹೇಳಿಕೆ ಎಂದು ಪರಿಗಣಿಸಿದ್ದರು. ಆದರೆ, ಎರಡು ವರ್ಷಗಳ ನಂತರದ ಪ್ರಸ್ತುತ ಸನ್ನಿವೇಶದಲ್ಲಿ ಪವಾರ್ ಅವರ ಮಾತು ಮತ್ತೆ-ಮತ್ತೆ ನೆನಪಾಗುತ್ತದೆ. ಭಾರತದಲ್ಲಿನ ಸದ್ಯದ ರಾಜಕೀಯ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದರೆ, ಶರದ್ ಪವಾರ್ ಅಂದು ಆಡಿದ್ದ ಮಾತುಗಳು ಅಕ್ಷರಶಃ ನಿಜವಾಗುವತ್ತ ಹೆಜ್ಜೆ ಇಡುತ್ತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಈಗ ಪ್ರಾದೇಶಿಕ ವಿರೋಧ ಪಕ್ಷಗಳು ಎದುರಿಸುತ್ತಿರುವ ಬಿಕ್ಕಟ್ಟು ಮತ್ತು ಆಂತರಿಕ ಸವಾಲುಗಳು ಈ ವಿಲೀನದ ಚರ್ಚೆಗಳಿಗೆ ಹೊಸ ಜೀವ ತುಂಬಿವೆ.

ಅಂದಹಾಗೆ, ದೇಶದ ಪ್ರಮುಖ ಪ್ರಾದೇಶಿಕ ಶಕ್ತಿಗಳಾದ ಪಶ್ಚಿಮ ಬಂಗಾಳದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಮಹಾರಾಷ್ಟ್ರದ ರಾಷ್ಟ್ರೀಯತಾವಾದಿ ಕಾಂಗ್ರೆಸ್ (ಎನ್‌ಸಿಪಿ) ಪಕ್ಷಗಳು ತಮ್ಮ ಮೂಲ ಬೇರು ಕಾಂಗ್ರೆಸ್ ಜೊತೆಗೆ ವಿಲೀನವಾಗುವ ಕುರಿತು ತೆರೆಯ ಮರೆಯಲ್ಲಿ ಗಂಭೀರ ಚರ್ಚೆಗಳು ನಡೆಯುತ್ತಿವೆ ಎಂಬ ಮಾತುಗಳು ರಾಜಕೀಯ ಪಡಸಾಲೆಯಲ್ಲಿ ದಟ್ಟವಾಗಿವೆ.

ಈ ಬೆಳವಣಿಗೆಯು ಕೇವಲ ಎರಡು ಪಕ್ಷಗಳ ಅಸ್ತಿತ್ವದ ಪ್ರಶ್ನೆಯಷ್ಟೇ ಅಲ್ಲ, ಬದಲಾಗಿ ಇಡೀ ದೇಶದ ವಿರೋಧ ಪಕ್ಷಗಳ ಒಕ್ಕೂಟದ ಭವಿಷ್ಯ ಮತ್ತು ಭಾರತದ ಪ್ರಜಾಪ್ರಭುತ್ವದ ಸ್ವರೂಪವನ್ನೇ ಬದಲಾಯಿಸುವ ಸಾಧ್ಯತೆಯೂ ಇದೆ.

ಸತತ ಚುನಾವಣಾ ಸೋಲುಗಳು, ಆಂತರಿಕ ಒಡಕುಗಳು ಹಾಗೂ ಕೇಂದ್ರೀಕೃತ ರಾಷ್ಟ್ರೀಯ ರಾಜಕಾರಣದ ಅಬ್ಬರದ ನಡುವೆ ಪ್ರಾದೇಶಿಕ ಪಕ್ಷಗಳು ದುರ್ಬಲವಾಗುತ್ತಿವೆ. ಅವುಗಳ ಶಕ್ತಿ ಕ್ಷೀಣಿಸುತ್ತಿದೆ. ಇದು ಮಹಾ ವಿಲೀನದ ಅನಿವಾರ್ಯತೆಗೆ ಮುಖ್ಯ ಕಾರಣವೂ ಆಗಿದೆ.

ಇತಿಹಾಸವನ್ನು ನೋಡಿದರೆ, ಕಳೆದ ಎರಡು ದಶಕಗಳಲ್ಲಿ ಭಾರತೀಯ ರಾಜಕಾರಣದಲ್ಲಿ ಪ್ರಾದೇಶಿಕ ಪಕ್ಷಗಳು ಅತ್ಯಂತ ಪ್ರಬಲ ಭೂಮಿಕೆಯನ್ನು ನಿರ್ವಹಿಸಿದ್ದವು. ಕೇಂದ್ರದಲ್ಲಿ ಮೈತ್ರಿ ಸರ್ಕಾರಗಳನ್ನು ರಚಿಸುವಲ್ಲಿ ಮತ್ತು ಪ್ರಾದೇಶಿಕ ಅಸ್ಮಿತೆಯನ್ನು ಕಾಯ್ದುಕೊಳ್ಳುವಲ್ಲಿ ಈ ಪಕ್ಷಗಳು ಯಶಸ್ವಿಯಾಗಿದ್ದವು. ಆದರೆ, ಇತ್ತೀಚಿನ ವರ್ಷಗಳಲ್ಲಿ ರಾಷ್ಟ್ರೀಯ ಮಟ್ಟದ ರಾಜಕೀಯವು



ಸಂಪೂರ್ಣವಾಗಿ ಧ್ರುವೀಕರಣಗೊಳ್ಳುತ್ತಿದೆ. ಚುನಾವಣೆಗಳು ವ್ಯಕ್ತಿ ಕೇಂದ್ರಿತ ಮತ್ತು ರಾಷ್ಟ್ರೀಯ ಸಿದ್ಧಾಂತಗಳ ಆಧಾರದ ಮೇಲೆ ನಡೆಯುತ್ತಿವೆ. ಜೊತಗೆ, ಮೋದಿ ಸರ್ಕಾರವು ಸಣ್ಣ-ಪುಟ್ಟ ಪಕ್ಷಗಳು ನುಂಗಿಹಾಕುವ ತೋಳದಂತೆ ವರ್ತಿಸುತ್ತಿದೆ. ಪ್ರದೇಶಿಕ ಪಕ್ಷಗಳ ಮೇಲೆ ಕೇಂದ್ರ ತನಿಖಾ ಸಂಸ್ಥೆಗಳನ್ನು ಛೂಬಿಟ್ಟು ದಮನಿಸುತ್ತಿದೆ. ಪಕ್ಷಗಳನ್ನು ಒಡೆದು, ಚೂರು ಮಾಡಿ, ಅವುಗಳ ಅಸ್ತಿತ್ವವೇ ಇಲ್ಲದಂತೆ ಮಾಡುತ್ತಿದೆ.

ಮೋದಿ ಸರ್ಕಾರದ ದಮನಕಾರಿ ಧೋರಣೆ ಒಂದೆಡೆಯಾದರೆ, ಮತ್ತೊಂದೆಡೆ, ಮತದಾರರ ದೃಷ್ಟಿಕೋನಗಳೂ ಬದಲಾಗುತ್ತಿವೆ. ಈ ಹಿಂದೆ, ರಾಜ್ಯದ ಚುನಾವಣೆಗಳಲ್ಲಿ ಪ್ರಾದೇಶಿಕ ಪಕ್ಷಗಳಿಗೆ ಉಘೇ ಎನ್ನುತ್ತಿದ್ದ ಮತದಾರರು, ಈಗ ಸ್ಥಳೀಯ ಚುನಾವಣೆಗಳಲ್ಲೂ ರಾಷ್ಟ್ರೀಯ ಪಕ್ಷಗಳನ್ನೇ ಆಯ್ಕೆ ಮಾಡುವ ಪರಿಪಾಠ ಆರಂಭವಾಗಿದೆ. ಜೊತೆಗೆ, ವಿಪಕ್ಷಗಳಲ್ಲಿ ಒಗ್ಗಟ್ಟಿನ ಕೊರತೆಯು ಮತ ವಿಭಜನೆಗೂ ಕಾರಣವಾಗುತ್ತಿದೆ.

ಇಂತಹ ಪರಿಸ್ಥಿತಿಯಲ್ಲಿ, ಪ್ರತ್ಯೇಕವಾಗಿ ಹೋರಾಡಿ ಧೂಳೀಪಟವಾಗುವ ಬದಲು, ರಾಷ್ಟ್ರೀಯ ಅಸ್ತಿತ್ವ ಹೊಂದಿರುವ ಕಾಂಗ್ರೆಸ್ ನಾಯಕತ್ವದ ಅಡಿಯಲ್ಲಿ ಒಂದಾಗುವುದೇ ಸೂಕ್ತ ಎಂಬ ಆಲೋಚನೆ ಪ್ರಾದೇಶಿಕ ನಾಯಕರಲ್ಲಿ ಮೂಡಲಾರಂಭಿಸಿದೆ ಎಂದ ಚರ್ಚೆಗಳು ಈಗ ಮುನ್ನೆಲೆಯಲ್ಲಿವೆ.

ಈ ಇಡೀ ವಿಲೀನದ ಚರ್ಚೆಯಲ್ಲಿ ಅತ್ಯಂತ ಕುತೂಹಲಕಾರಿ ಅಂಶವೆಂದರೆ, ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ. ಮಮತಾ ಮೂಲತಃ ಕಾಂಗ್ರೆಸ್‌ನವರು. 1998ರಲ್ಲಿ ಕಾಂಗ್ರೆಸ್ ಪಕ್ಷದಿಂದ ಸೈದ್ಧಾಂತಿಕ ಮತ್ತು ನಾಯಕತ್ವದ ಭಿನ್ನಾಭಿಪ್ರಾಯಗಳ ಕಾರಣದಿಂದ ಹೊರಬಂದು ಟಿಎಂಸಿ ಕಟ್ಟಿದ್ದರು. ಪಶ್ಚಿಮ ಬಂಗಾಳದಲ್ಲಿ ದಶಕಗಳಿಂದ ಇದ್ದ ಎಡಪಕ್ಷಗಳ ಭದ್ರಕೋಟೆಯನ್ನು ಧ್ವಂಸಗೊಳಿಸಿ, ತಮ್ಮದೇ ಸಾಮ್ರಾಜ್ಯವನ್ನು ಕಟ್ಟಿದ್ದರು.

ಕಳೆದೊಂದು ಚುನಾವಣೆ ಮಮತಾರ ಭದ್ರಕೋಟೆಯನ್ನು ನುಚ್ಚನೂರು ಮಾಡಿತು. ಕೊಂಚ ಆಡಳಿತ ವಿರೋಧಿ ಅಲೆ ಎದುರಿಸುತ್ತಿದ್ದ ಟಿಎಂಸಿಯನ್ನು ಸೋಲಿಸಲು ಎಸ್‌ಐಆರ್ ಎಂಬ ಪೆಡಂಭೂತವನ್ನು ಹೇರಿದ ಬಿಜೆಪಿ, ಮತಗಳನ್ನು ಅಳಿಸಿ ಅಧಿಕಾರ ಕಬಳಿಸಿದೆ. ಮಾತ್ರವಲ್ಲ, ಟಿಎಂಸಿಯೊಳಗೆ ಒಡಕು ಮೂಡಿಸಿದೆ. ಪಕ್ಷದ ಶಾಸಕರು ಮತ್ತು ಸಂಸದರು ತಮ್ಮದೇ ನಾಯಕರ ವಿರುದ್ಧ ಬಂಡಾಯ ಏಳುವಂತೆ ಮಾಡಿದೆ. ಪಕ್ಷವನ್ನು ನಿರ್ನಾಮ ಮಾಡಲು ಹವಣಿಸುತ್ತಿದೆ.

ಈಗ, ಮಮತಾ ಅವರ ಟಿಎಂಸಿ ಅಳಿವು-ಉಳಿವಿನ ನಡುವೆ ಹೋರಾಡುತ್ತಿದೆ. ದೆಹಲಿಯಲ್ಲಿನ ಕಾಂಗ್ರೆಸ್ ನಾಯಕರ ಕದ ತಟ್ಟುವಂತೆ ಮಾಡಿದೆ. ಇಂಡಿಯಾ ಮೈತ್ರಿಕೂಟವನ್ನು ಕಡೆಗಣಿಸಿದ್ದ ಮಮತಾ, ಈಗ ಅದೇ ಮೈತ್ರಿಕೂಟವನ್ನು ಶಿಸ್ತಿನಿಂದ ಒಳಗೊಳ್ಳುತ್ತಿದ್ದಾರೆ. ಮಾತ್ರವಲ್ಲದೆ, ಕಾಂಗ್ರೆಸ್‌ನ ವರಿಷ್ಠರನ್ನು ಮಮತಾ ಮತ್ತು ಅವರ ಸೋದರಳಿಯ, ಟಿಎಂಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಭೇಟಿ ಮಾಡಿ, ಚರ್ಚೆ ನಡೆಸಿದ್ದಾರೆ. ಈ ಭೇಟಿಯ ವೇಳೆ ಕಾಂಗ್ರೆಸ್ ಜೊತೆ ಟಿಎಂಸಿಯ ವಿಲೀನದ ಮಾತುಕತೆಗಳೂ ನಡೆದಿವೆ ಎನ್ನಲಾಗಿದೆ.

ಒಂದು ವೇಳೆ, ಟಿಎಂಸಿ ಅಧಿಕೃತವಾಗಿ ಕಾಂಗ್ರೆಸ್‌ನೊಂದಿಗೆ ವಿಲೀನವಾದರೆ, ಅದು ಭಾರತೀಯ ರಾಜಕಾರಣಕ್ಕೆ ಹೊಸ ದಿಕ್ಕು-ಹಾದಿಯನ್ನು ಸೃಷ್ಟಿಸಲಿದೆ ಎಂದು ಭಾವಿಸಲಾಗಿದೆ. ಬಂಗಾಳದಲ್ಲಿ ಜಾತ್ಯತೀತ ಮತಗಳು ವಿಭಜನೆಯಾಗುವುದನ್ನು ತಪ್ಪಿಸಬಹುದು. ಜೊತೆಗೆ, ಮಮತಾ ಬ್ಯಾನರ್ಜಿ ಅವರಿಗೆ ರಾಷ್ಟ್ರೀಯ ಮಟ್ಟದಲ್ಲಿ ಅತ್ಯುನ್ನತ ನಾಯಕತ್ವದ ಸ್ಥಾನಮಾನವೂ ಸಿಗುಲಿದೆ. ಮಮತಾಗಿರುವ ಬದ್ಧತೆ, ಹೋರಾಟದ ಕಿಚ್ಚು, ಸಂಘಟನಾ ಸಾಮರ್ಥ್ಯವು ಕಾಂಗ್ರೆಸ್‌ಗೂ ಶಕ್ತಿ ತುಂಬಲಿದೆ.

ಅದೇ ರೀತಿ, ಮಹಾರಾಷ್ಟ್ರದಲ್ಲಿ ಪ್ರಮುಖ ಶಕ್ತಿಯಾಗಿರುವ, ಆಡಳಿತವನ್ನೂ ನಡೆಸಿರುವ ಶರದ್ ಪವಾರ್ ನೇತೃತ್ವದ ಎನ್‌ಸಿಪಿ ಕೂಡ ಟಿಎಂಸಿಯ ಹಾದಿಯಲ್ಲಿಯೇ ಇದೆ. 1999ರಲ್ಲಿ ಸೋನಿಯಾ ಗಾಂಧಿ ವಿದೇಶಿ ಮಹಿಳೆಯೆಂಬ ವಾದ ಮುಂದಿಟ್ಟು ಶರದ್ ಪವಾರ್, ತಾರಿಕ್ ಅನ್ವರ್ ಹಾಗೂ ಪಿ.ಎ. ಸಂಗ್ಮಾ ಅವರು ಕಾಂಗ್ರೆಸ್ ತೊರೆದು ಎನ್‌ಸಿಪಿ ಸ್ಥಾಪಿಸಿದ್ದರು. ಆದರೆ, ಇಂದು ಎನ್‌ಸಿಪಿ ಕೂಡ ಅಳಿವಿನ ಅಂಚಿನಲ್ಲಿದೆ. ಮಹಾರಾಷ್ಟ್ರದಲ್ಲಿ ಎನ್‌ಸಿಪಿ ಉಸಿರಾಡುತ್ತಿರುವುದೇ ಕಾಂಗ್ರೆಸ್ ಜೊತೆಗಿನ ಸಖ್ಯದಿಂದ ಎಂಬುದೂ ಮೇಲ್ನೋಟಕ್ಕೆ ಕಾಣುತ್ತಿದೆ.

2022ರಲ್ಲಿ ಎನ್‌ಸಿಪಿಯೊಳಗೆ ಸಂಭವಿಸಿದ ಭಾರಿ ಬಂಡಾಯ ಮತ್ತು ಅಜಿತ್ ಪವಾರ್ ನೇತೃತ್ವದ ಬಣವು ಮಹಾಯುತಿ (ಬಿಜೆಪಿ) ಜೊತೆ ಕೈಜೋಡಿಸಿದ್ದು ಶರದ್ ಪವಾರ್ ಅವರಿಗೆ ದೊಡ್ಡ ಆಘಾತ ನೀಡಿತ್ತು. ಪಕ್ಷದ ಹೆಸರು ಮತ್ತು ಚಿಹ್ನೆ ಎರಡೂ ಅವರ ಕೈಬಿಟ್ಟು ಹೋದವು. ಅಕ್ಷರಶಃ, ಶರದ್ ಪವಾರ್ ಅವರು ಹೊಸ ಪಕ್ಷವನ್ನು ಕಟ್ಟಿದಂತೆ ತನ್ನ ಪಕ್ಷವನ್ನು ಜೋಡಿಸಿಕೊಳ್ಳಬೇಕಾಯಿತು. ಆದರೂ, ಹೋರಾಟದ ಗುಣ ಬಿಡದ ಪವಾರ್, ಗಟ್ಟಿಯಾಗಿ ನಿಂತರು, ಅವರಿಗೆ ಕಾಂಗ್ರೆಸ್ ಹೆಗಲು ಕೊಟ್ಟಿತು.

ಈಗ, ಮಹಾರಾಷ್ಟ್ರದ ಪ್ರಸ್ತುತ ಜಟಿಲ ರಾಜಕೀಯ ಪರಿಸ್ಥಿತಿಯಲ್ಲಿ ಕೇವಲ ಒಂದು ಸಣ್ಣ ಬಣವಾಗಿ ಉಳಿದು ಹೋರಾಡುವುದಕ್ಕಿಂತ, ತಮ್ಮ ಮಾತೃಸಂಸ್ಥೆಯಾದ ಕಾಂಗ್ರೆಸ್‌ನೊಂದಿಗೆ ಪಕ್ಷವನ್ನು ವಿಲೀನಗೊಳಿಸುವುದು ಅತ್ಯಂತ ಗೌರವಾನ್ವಿತ ಮತ್ತು ಸುರಕ್ಷಿತ ಮಾರ್ಗ ಎಂದು ಪವಾರ್ ಭಾವಿಸುತ್ತಿದ್ದಾರೆ. ಇದು ಅವರ ನಿಷ್ಠಾವಂತ ಕಾರ್ಯಕರ್ತರಿಗೆ ರಾಷ್ಟ್ರೀಯ ಪಕ್ಷದ ರಕ್ಷಣೆ ನೀಡುವುದಲ್ಲದೆ, ಮಹಾರಾಷ್ಟ್ರದಲ್ಲಿ ಸೀಟು ಹಂಚಿಕೆಯ ಗೊಂದಲಗಳನ್ನು ಶಾಶ್ವತವಾಗಿ ಪರಿಹರಿಸುತ್ತದೆ. ಈ ವಿಲೀನ ಪ್ರಕ್ರಿಯೆಯು ಪೂರ್ಣಗೊಂಡರೆ, ಅದು ಇತಿಹಾಸದ ಚಕ್ರವೊಂದು ಸಂಪೂರ್ಣವಾಗಿ ಸುತ್ತಿ ಮತ್ತೆ ಮೂಲ ಸ್ಥಾನಕ್ಕೆ ಬಂದಂತಾಗುತ್ತದೆ.

ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ, ಎನ್‌ಡಿಎ ಒಳಗಿನ ಪ್ರಾದೇಶಿಕ ಪಕ್ಷಗಳನ್ನು ಸ್ವತಃ ಬಿಜೆಪಿಯೇ ನುಂಗಿ ನೀರು ಕುಡಿಯುತ್ತಿದೆ. ವಿಪಕ್ಷಗಳಲ್ಲಿರುವ ಸ್ಥಳೀಯ ಪಕ್ಷಗಳನ್ನು ಒಡೆದು, ಚೂರು ಮಾಡುತ್ತಿದೆ. ಪ್ರಾದೇಶಿಕ ಪಕ್ಷಗಳು ಕೃಶಗೊಂಡಿರುವ ಈ ಸಮಯದಲ್ಲಿ, ಕಾಂಗ್ರೆಸ್ ಪಕ್ಷವು ಪ್ರವಾಹದಲ್ಲಿ ಸಿಕ್ಕ ಗರಿಕೆಯಂತೆ ಕಾಣುತ್ತಿದೆ.

ಹಲವು ರಾಜ್ಯಗಳಲ್ಲಿ ಪ್ರದೇಶಿಕ ವಿಪಕ್ಷಗಳು ರಾಷ್ಟ್ರೀಯ ಪಕ್ಷದೊಂದಿಗೆ ವಿಲೀನವಾಗುತ್ತಿರುವ ಈ ಪ್ರವೃತ್ತಿಯು ಭಾರತೀಯ ಪ್ರಜಾಪ್ರಭುತ್ವದ ಚೌಕಟ್ಟಿನ ಮೇಲೆ ದೀರ್ಘಾವಧಿಯ ಸಕಾರಾತ್ಮಕ ಪರಿಣಾಮಗಳನ್ನು ಬೀರಲಿದೆ ಎಂದು ನಂಬಲಾಗಿದೆ. ವಿರೋಧ ಪಕ್ಷಗಳ ಶಕ್ತಿಯು ಒಂದೇ ಸೂರಿನಡಿ ಬಲಗೊಂಡರೆ, ಫ್ಯಾಸಿಸ್ಟ್ ಧೋರಣೆಯುಳ್ಳ ಬಿಜೆಪಿ ವಿರುದ್ಧ ಬಲಿಷ್ಠ ಮತ್ತು ಸಂಘಟಿತ ಹೋರಾಟ ಕಟ್ಟಲು ಸಾಧ್ಯವಾಗುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR